# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 156
Volume - 01 Issue - 156
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 03–01–2024 ಬುಧವಾರ
Date: 03-01-2024 Wednesday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಸಾಮಾಜಿಕ ಶಿಲ್ಪಿಗಳಂತೆ ಕಾರ್ಯ ನಿರ್ವಹಿಸುವ ವಕೀಲರು: ನ್ಯಾ.ರಾಜೇಶ್ವರಿ 2

ಜನರ ಅಹವಾಲು ತಿಂಗಳೊಳಗೆ ಪರಿಹರಿಸಿ: ಸಚಿವ ಸುಧಾಕರ್ ಸೂಚನೆ 3

ಕಾಶ್ಮೀರದ ಪ್ರವಾಸದಲ್ಲಿ ಕೆಲ ನಿಮಿಷಗಳು ನಿಮ್ಮೊಂದಿಗೆ...... 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಶಾಸಕರ ಭವನದಲ್ಲಿ ಹೊಸವರ್ಷದ ಸಂಭ್ರಮ

# ಲೋಕಸಭಾ ಚುನಾವಣೆ ಗೆಲುವಿಗೆ ಎಲ್ಲಾರೂ ಸಂಕಲ್ಪ ಮಾಡಿ: ಶಾಸಕ ರಘುಮೂರ್ತಿ ಕರೆ

» ನಮ್ಮ ಜನ ಸುದ್ದಿ ಮನೆ

ಚಳ್ಳಕೆರೆ–02 ಕಳೆದ 11 ವರ್ಷಗಳಿಂದ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕನಾಗಿ ಕಾರ್ಯನಿರ್ವಹಿಸುತ್ತಿದ್ದು, ಈ ಭಾಗದ ಜನರ ಸಂಕಷ್ಟಗಳಿಗೆ ನೆರವಾಗುವ ಅವಕಾಶವನ್ನು ಭಗವಂತ ಮಾಡಿಕೊಟ್ಟಿದ್ದು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಜನಸೇವೆ ಹಾಗೂ ಅಭಿವೃದ್ಧಿಯಲ್ಲಿ ತೊಡಗಲು ಹೊಸವರ್ಷದ ದಿನ ಸಂಕಲ್ಪ ಮಾಡಿರುವುದಾಗಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಮಂಗಳವಾರ ಶಾಸಕರ ಭವನದಲ್ಲಿ ಚಳ್ಳಕೆರೆ ಮತ್ತು ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಘಟಕ ಹಮ್ಮಿಕೊಂಡಿದ್ದ ಹೊಸವರ್ಷ–2024ರ ಸಂಭ್ರಮವನ್ನು ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಿದಲ್ಲದೆ, ಪಕ್ಷದ ಕಾರ್ಯಕರ್ತರು, ಮುಖಂಡರು ಸಹ ಚುನಾವಣೆಯಲ್ಲಿ ಪಕ್ಷದ ಗೆಲುವಿಗಾಗಿ ಸಂಕಲ್ಪ ಮಾಡಿ ಎಂದರು. 2023ರಲ್ಲಿ ಕರ್ನಾಟಕ ರಾಜ್ಯದ ಜನತೆ 135 ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿ ಅಧಿಕಾರ ನೀಡಿರುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಚುನಾವಣೆ ಸಂದರ್ಭದಲ್ಲಿ ನೀಡಿದ ಎಲ್ಲಾ ಗ್ಯಾರಂಟಿಗಳನ್ನು ಈಡೇರಿಸುವಲ್ಲಿ ಸರ್ಕಾರ ಸಫಲವಾಗಿದೆ.ಪ್ರಸ್ತುತ2024ರಲೋಕಸಭಾ ಚುನಾವಣೆಯಲ್ಲಿ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವನಿಟ್ಟಿನಲ್ಲಿ ಎಲ್ಲರೂ ಕಾರ್ಯನಿರ್ವಹಿಸಬೇಕು ಎಂದರು. ಹಿರಿಯ ಮುಖಂಡ ಟಿ.ಪ್ರಭುದೇವ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಜಿಪಂ ಕೆಡಿಪಿ ನಾಮಿನಿ ಸದಸ್ಯ ಓ.ರಂಗಸ್ವಾಮಿ, ಸಿ.ಟಿ.ಶ್ರೀನಿವಾಸ್, ಬಿ.ವಿ.ಸಿರಿಯಣ್ಣ, ಬಡಗಿಪಾಪಣ್ಣ, ಎನ್. ಮಂಜುನಾಥ, ಚೇತನ್‌ಕುಮಾರ್, ಪಾಲಯ್ಯ, ನಾಗರಾಜು, ರುದ್ರಮುನಿ, ನೇತಾಜಿಪ್ರಸನ್ನ, ಆರ್.ಪ್ರಸನ್ನಕುಮಾರ್, ಮಹಿಳಾ ಘಟಕದ ಅಧ್ಯಕ್ಷೆ ಗೀತಾಬಾಯಿ, ಭಾಗ್ಯಮ್ಮ, ರಾಜೇಶ್ವರಿ, ಉಷಾ, ಸರಸ್ವತಿ ಮುಂತಾದವರು ಉಪಸ್ಥಿತರಿದ್ದರು.





> ಹೊಸ ವರ್ಷ ಕ್ಷೇತ್ರದ ಜನರಿಗೆ ಒಳ್ಳೆಯದಾಗಲಿ. ನನ್ನ ಕಳೆದ ಹನ್ನೊಂದು ವರ್ಷಗಳಿಂದ ಗೆಲುವು ಸಾಧಿಸಲು ಸಹಕಾರ, ಪ್ರೀತಿ ವಿಶ್ವಾಸವನ್ನು ಜನರು ನೀಡಿದ್ದು ಚಳ್ಳಕೆರೆ ಜನರ ಪ್ರೀತಿ ಮನಸೋತಿದ್ದೇನೆ. ಕ್ಷೇತ್ರದ ಅಭಿವೃದ್ಧಿಗೆ ಬದ್ಧವಾಗಿದ್ದೇನೆ. ಮುಂದೆ ಬರಲಿರುವ ಎಂಪಿ ಚುನಾವಣೆ ಗೆಲುವಿಗೆ ಎಲ್ಲಾರೂ ಸಿದ್ಧವಾಗಬೇಕು ಎಂದು ಕರೆ ನೀಡಿದ್ದೇನೆ.
>
> » ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ ಕ್ಷೇತ್ರ

## ಫಾಸ್ಟ್ ನ್ಯೂಸ್

### ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರಕ್ಕೆ ಅರ್ಜಿ

» ಚಿತ್ರದುರ್ಗ

ಧಾರವಾಡ ಕೃಷಿ ವಿಶ್ವವಿದ್ಯಾಲಯ, ಚಳ್ಳಕೆರೆಯ ಭಾರತೀಯ ವಿಜ್ಞಾನ ಸಂಸ್ಥೆ–ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ ಇವರ ಸಂಯುಕ್ತಾಶ್ರಯದಲ್ಲಿ "ಬಾಳೆದಿಂಡಿನಿಂದ ನಾರು ಸಂಸ್ಕರಣೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಕೌಶಲ್ಯ ಅಭಿವೃದ್ಧಿ ತರಬೇತಿ" ಕಾರ್ಯಾಗಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಕಾರ್ಯಕ್ರಮವನ್ನು ಜಿಲ್ಲೆಯ ರೈತರು, ಬಾಳೆ ಬೆಳೆಗಾರರು, ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಉಳ್ಳವರು ಮತ್ತು ಕುಶಲಕರ್ಮಿಗಳಿಗಾಗಿ ಆಯೋಜಿಸಲಾಗಿದೆ. ಇದು ಐದು ದಿನಗಳ ತರಬೇತಿ ಕಾರ್ಯಾಗಾರವಾಗಿದ್ದು, ಇದೇ ಜನವರಿ 8 ರಿಂದ 12 ರವರೆಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು ಇದೇ ಜನವರಿ 6ರೊಳಗೆ ಗಣೇಶ್ ತೋಳಾರ್ ಅವರ ದೂರವಾಣಿ ಸಂಖ್ಯೆ 7349695100 ಹಾಗೂ ಕೋಟೇಶ್ ಕೊರವರ ಅವರ ದೂರವಾಣಿ ಸಂಖ್ಯೆ 9663364234 ಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಬಹುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ನೋಂದಾಯಿಸಿದ ನಂತರ ಸಂಸ್ಥೆಯು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅಭ್ಯರ್ಥಿಗಳಿಗೆ ತಿಳಿಸಲಾಗುವುದು. ಆಯ್ಕೆ ಆದ ಅಭ್ಯರ್ಥಿಗಳು ಕಡ್ಡಾಯವಾಗಿ ಐದು ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಬೇಕು. ಈ ತರಬೇತಿ ಕಾರ್ಯಾಗಾರದಲ್ಲಿ ಆಯ್ಕೆ ಆದ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಸಂಸ್ಥೆಯು ನೋಡಿಕೊಳ್ಳುತ್ತದೆ. ಈ ಕಾರ್ಯಾಗಾರ ಸಂಪೂರ್ಣ ಉಚಿತವಾಗಿದ್ದು, ಆಸಕ್ತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಳ್ಳಕೆರೆಯ ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತಾ ಕೇಂದ್ರದ ಕಾರ್ಯಕ್ರಮ ವ್ಯವಸ್ಥಾಪಕ ಪ್ರತಾಪ್ ಮೂರ್ತಿ ಕೋರಿದ್ದಾರೆ.

### ಪಿ.ಗೌರಿಪುರದಲ್ಲಿ ಕಡೇ ಕಾರ್ತಿಕೋತ್ಸವ- ಬ್ರಹ್ಮ ರಥೋತ್ಸವ

» ಪರಶುರಾಂಪುರ

ಸಮೀಪದ ಪಿ.ಗೌರಿಪುರದಲ್ಲಿ ಕಡೇ ಕಾರ್ತಿಕೋತ್ಸವದ ಅಂಗವಾಗಿ ಕಳೆದ ದಿನಗಳಿಂದ ಶ್ರೀ ಪ್ರಸನ್ನ ಆಂಜನೇಯಸ್ವಾಮಿ ಹಾಗೂ ಶ್ರೀ ಕೊಲ್ಲಾಪುರದಮ್ಮನವರಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ದಾ–ಭಕ್ತಿಯಿಂದ ಜರುಗುತ್ತಿವೆ.ಜ.04 ಗುರುವಾರ ದೇವತಾ ಕಾರ್ಯಗಳೊಂದಿಗೆ ಕಳಸ ಸ್ಥಪನೆ ,ರಕ್ಷಾ ಬಂಧನ, ಧ್ವಜರೋಹಣ ಸೇರಿದಂತೆ ಇನ್ನಿತರೆ ಕಾರ್ಯಗಳು ನಡೆಯಲಿವೆ.ಜ.05 ಶುಕ್ರವಾರ ಪ್ರಾತ: ಕಾಲದಲ್ಲಿ ಸುಪ್ರಭಾತ ಸೇವೆಯೊಂದಿಗೆ ಪ್ರಾರಂಭವಾಗಿ ಸ್ವಾಮಿಯನ್ನ ಜನಪದ ವಾದ್ಯಗಳೊಂದಿಗೆ ಗಂಗಾ ಪೂಜೆಗೆ ಕರೆದೊಯ್ದು ಬಳಿಕ ಹೊಸ ವಸ್ತ್ರ ಹಾಗೂ ಅಲಂಕಾರದೊಂದಿಗೆ ಮೂಲ ಸನ್ನಿದಿಗೆ ಕರೆದ್ಯೊಯುವದು. ಬಳಿಕ ಶ್ರೀರಾಮ ಕಲ್ಯಾಣೋತ್ಸವ ನಡೆದ ನಂತರ ಶ್ರೀ ಆಂಜನೇಯ ಸ್ವಾಮಿಯ ಉಚ್ಚಾಯ ಸೇವೆ ಸಲ್ಲಿಸಲಾಗುವುದು.

ಜ.06 ಶನಿವಾರ ಸ್ವಾಮಿಗೆ ಪಂಚಾಮೃತ ಅಭಿಷೇಕ , ಕುಂಭಾರಾಧನೆ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳ ಜತೆ ಅ ದಿನ ಸ್ವಾಮಿಯ ಬ್ರಹ್ಮರಥೋತ್ಸವ ಭಕ್ತರ ಸಮ್ಮುಖದಲ್ಲಿ ನಡೆಯುವುದು.ಬಳಿಕ ಎಲೆ ಪೂಜೆ ,ಕಾರ್ತಿಕ ದೀಪೋತ್ಸವ ಹಾಗೂ ಸ್ವಾಮಿಗೆ ಶಯನೋತ್ಸವ ಕಾರ್ಯವು ಜರುಗುತ್ತವೆ.ಜ.07 ಭಾನುವಾರ ದೇವರಿಗೆ ಪಂಚಾಮೃತ ಅಭಿಷೇಕದೊಂದಿಗೆ ,ಸ್ವಾಮಿಯನ್ನ ವಿಶೇಷ ಅಲಂಕಾರದೊಂದಿಗೆ ಮಹಾ ಮಂಗಳರತಿ ಜತೆ ತೀರ್ಥಪ್ರಸಾದೊಂದಿಗೆ ಬೆಳಗ್ಗೆ ಅನ್ನಸಂತರ್ಪಣೆ ಕಾರ್ಯವು ಜರುಗುವುದು.

## ಮಂಡಿಮಠ ಮಿಲ್ ಸನ್ನಿಹದಲ್ಲಿ ಕಿರಿದಾದ ಸೇತುವೆ ಬಳಿ ಅಪಘಾತ

# ಲಾರಿ ಡಿಕ್ಕಿ: ಬೆಸ್ಕಾಂ ಲೈನ್‌ಮ್ಯಾನ್ ರಂಗಸ್ವಾಮಿ ಸಾವು

» ಚಳ್ಳಕೆರೆ

ನಗರದಬೆಂಗಳೂರುರಸ್ತೆಯಮಂಡಿಮಠಮಿಲ್‌ನ ಸೇತುವೆ ಬಳಿ ಲಾರಿ ಹಾಗೂ ಮೋಟಾರ್ ಬೈಕ್ ನಡುವೆ ಡಿಕ್ಕಿ ಸಂಭವಿಸಿ ಬೈಕ್ ಸವಾರ ಬೆಸ್ಕಾಂ ಲೈನ್‌ಮ್ಯಾನ್ ಸಿದ್ದಾಪುರದ ರಂಗಸ್ವಾಮಿ(50) ಗಾಯಗೊಂಡು ಇಲ್ಲಿನ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯದಲ್ಲೇ ಮೃತಪಟ್ಟಿರುತ್ತಾನೆ.





ತಮಿಳುನಾಡು ಮೂಲದ ಲಾರಿ ಹಿರಿಯೂರು ಕಡೆಯಿಂದ ಚಳ್ಳಕೆರೆಗೆ ಆಗಮಿಸುತ್ತಿದ್ದು, ಲೈನ್‌ಮ್ಯಾನ್ ರಂಗಸ್ವಾಮಿ ದೇವರಪೂಜೆಗೆಂದು ಚಳ್ಳಕೆರೆಯಿಂದ ಹೂ ಖರೀದಿಸಿ ಊರಿಗೆ ಹೋಗುವ ಸಂದರ್ಭದಲ್ಲಿ ಕಿರಿದಾದ ಸೇತುವೆ ಬಳಿ ಲಾರಿ ಎದುರಾಗಿದೆ. ಲಾರಿಯ ರಭಸ ಕಂಡ ರಂಗಸ್ವಾಮಿ ಭಯಭೀತನಾಗಿದ್ದು ಲಾರಿ ಈತನಿಗೆ ಡಿಕ್ಕಿ ಪಡಿಸಿ ನಂತರ ಹಳ್ಳಕ್ಕೆ ಬಿದಿದ್ದೆ. ಡಿಕ್ಕಿ ಸಂಭವಿಸಿದ ಕೂಡಲೇ ಲಾರಿಚಾಲಕ ಸ್ಥಳದಿಂದ ನಾಪತ್ತೆಯಾಗಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕ್ರುದ್ದೀನ್ ದೇಸಾಯಿ, ಪಿಎಸ್‌ಐ ಕೆ.ಸತೀಶ್‌ನಾಯ್ಕ ಭೇಟಿ ನೀಡಿ ಪರಿಶೀಲಿಸಿದರು.

ಮೃತಪಟ್ಟ ಲೈನ್‌ಮ್ಯಾನ್ ರಂಗಸ್ವಾಮಿ ನಗರಂಗೆರೆ ಗ್ರಾಮ ಪಂಚಾಯಿತಿವ್ಯಾಪ್ತಿಯ ಸಿದ್ದಾಪುರ, ನಗಹರಿನಗರ ಹಾಗೂ ನಗರಂಗೆರೆ ಗ್ರಾಮದಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಪೂಜಾರಿಯೂ ಸಹ ಆಗಿದ್ದ. ಪ್ರತಿಶುಕ್ರವಾರ ಮತ್ತು ಮಂಗಳವಾರ ತನ್ನ ಮನೆಯಲ್ಲೇ ದೇವಿಯ ಪೂಜೆ ಮಾಡುತ್ತಿದ್ದ ಎನ್ನಲಾಗಿದೆ. ಪತ್ನಿ, ಇಬ್ಬರು ಮಕ್ಕಳು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾನೆ.

## ಯಾದವನಂದ ಸ್ವಾಮಿಜಿಗೆ ಪವಿತ್ರ ಮಂತ್ರಾಕ್ಷತೆ ವಿತರಣೆ



» ಚಿತ್ರದುರ್ಗ

ನಗರದ ಶ್ರೀ ಯಾದವನಂದ ಮಠಕ್ಕೆ ನಿನ್ನೆ ಸಂಜೆ ಭೇಟಿ ನೀಡಿದ ಮಂತ್ರಾಕ್ಷತೆ ಕಾರ್ಯಕ್ರಮದ ಪದಾಧಿಕಾರಿಗಳು ಅಯೋಧ್ಯೆಯಿಂದ ಪ್ರಭು ಶ್ರೀ ರಾಮನಿಗೆ ಪೂಜಿಸಿದ ಪವಿತ್ರ ಮಂತ್ರಾಕ್ಷತೆ ಹಾಗೂ ಶ್ರೀರಾಮ ಮಂದಿರದ ಉದ್ಘಾಟನೆಯ ಕರಪ್ರತಿ ಪತ್ರಿಕೆಯನ್ನು ಯಾದವ ಸಂಸ್ಥಾನ ಮಠದ ಶ್ರೀ ಯಾದವನಂದ ಮಹಾಸ್ವಾಮಿಗಳಿಗೆ ನೀಡಿ ಆಶೀರ್ವಾದ ಪಡೆಯಲಾಯಿತು.ಈ ಸಂದರ್ಭದಲ್ಲಿ ಬಿಜೆಪಿ ಯುವ ಮುಖಂಡರು ಮಂತ್ರಾಕ್ಷತೆ ಕಾರ್ಯಕ್ರಮದ ಜಿಲ್ಲಾ ತಂಡದ ಪ್ರಮುಖರಾದ ಜಿ.ಎಸ್ ಅನಿತ್ ಕುಮಾರ್, ಚಿತ್ರದುರ್ಗ ಬಿಜೆಪಿ ಜಿಲ್ಲಾಧ್ಯಕ್ಷ ಎ. ಮುರುಳಿ, , ಬಿಜೆಪಿ ಯುವ ಮುಖಂಡ ರಘು ಚಂದನ್ , ಜಿಲ್ಲಾ ಪ್ರಚಾರಕರಾದ ಶ್ರೀನಾಥ್, ವಿಶ್ವ ಹಿಂದೂ ಪರಿಷತ್ ಜಿಲ್ಲಾ ಕಾರ್ಯದರ್ಶಿ ರುದ್ರೇಶ್, ಎಬಿವಿಪಿ ಜಿಲ್ಲಾ ಸಂಚಾಲಕರಾದ ಡಾ. ಲೇಪಾಕ್ಷ, ಜಿಲ್ಲಾ ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಮುಖ್ಯಸ್ಥರಾದ ನಾಗೇಶ್ ಜಿ, ಜಿಲ್ಲಾ ತಂಡದ ಪ್ರಮುಖರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಸಚಿವ ಮಧುಬಂಗಾರಪ್ಪ ರಾಜೀನಾಮೆಗೆ ಎಬಿವಿಪಿ ಒತ್ತಾಯ

» ಚಿತ್ರದುರ್ಗ

ಚೆಕ್ ಬೌನ್ಸ್ ವಂಚನೆ ಪ್ರಕರಣದಲ್ಲಿ ಶಿಕ್ಷೆಗೆ ಒಳಗಾಗಿರುವ ಶಿಕ್ಷಣ ಸಚಿವ ಮಧುಬಂಗಾರಪ್ಪ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿಭಟನೆ ನಡೆಸಿತು.

ಶಿಕ್ಷಣವೆಂದರೆ 'ಮಾನವೀಯತೆಯ ವಿಕಾಸ,ಮನುಷ್ಯರಲ್ಲಿ ಪರಿಪೂರ್ಣತೆಯನ್ನು ತುಂಬುವುದೇ ಶಿಕ್ಷಣ. ಮನುಷ್ಯನ ವ್ಯಕ್ತಿತ್ವ ಶಿಕ್ಷಣದಿಂದ ಹೊರ ಬರುತ್ತದೆ ಎಂದು ವಿವೇಕಾನಂದರು ಹೇಳುತ್ತಿದ್ದರು,'ಭಾರತದ ಎಲ್ಲ ಸಮಸ್ಯೆಗಳಿಗೂ ಶಿಕ್ಷಣ ಒಂದೇ ಪರಿಹಾರ' ಎಂದು ನಂಬಿದ್ದರು ಆದರೆ ಚೆಕ್ ಬೌನ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪಗೆ ಜನಪ್ರತಿನಿಧಿಗಳ ನ್ಯಾಯಾಲಯ ಶಿಕ್ಷೆ ವಿಧಿಸಿದ್ದರು ಸಹಿತ ರಾಜ್ಯದ ಸರ್ಕಾರದ ಮಂತ್ರಿಗಳಾಗಿ ಮುಂದುವರೆದಿರುವುದು ವಿಷಾದನೀಯ ಈ ಕೂಡಲೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಆಗ್ರಹಿಸುತ್ತದೆ.



ಖಾಸಗಿ ಆಡಿಯೋ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಮಧು ಬಂಗಾರಪ್ಪ 2011 ರಲ್ಲಿ ರಾಜೇಶ ಎಕ್ಸಪೋರ್ಟ್ಸ್ ಸಂಸ್ಥೆಗೆ 6.6 ಕೋಟಿ ರೂ ಚೆಕ್ ನೀಡಿದ್ದರು. ಆದರೆ ಆ ಚೆಕ್ ಬೌನ್ಸ್ ಆಗಿತ್ತು. ಈ ಹಿನ್ನಲೆಯಲ್ಲಿ ಮಧು ಬಂಗಾರಪ್ಪ ವಿರುದ್ಧ ದೂರು ದಾಖಲಿಸಿತ್ತು. ಈ ನಡುವೆ ಮಧು ಬಂಗಾರಪ್ಪಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು 6.96 ಕೋಟಿ ರೂ ದಂಡ ವಿಧಿಸಿದ್ದು, ಒಂದು ವೇಳೆ ದಂಡ ಪಾವತಿಸದಿದ್ದರೆ 6 ತಿಂಗಳು ಸೆರೆವಾಸ ಅನುಭವಿಸಲು ನ್ಯಾಯಾಲಯ ಆದೇಶಿಸಿದೆ. ಈ ರೀತಿ ಶಿಕ್ಷೆಗೆ ಒಳಗಾಗಿರುವ ವ್ಯಕ್ತಿಯು ರಾಜ್ಯದ ಶಿಕ್ಷಣ ಇಲಾಖೆಗೆ ಕಪ್ಪು ಚುಕ್ಕೆ, ಇವರು ಈ ಇಲಾಖೆಯನ್ನು ಹೇಗೆ ನಿಭಾಯಿಸಲು ಸಾಧ್ಯವೇ ತಕ್ಷಣವೇ ರಾಜ್ಯದ ಮುಖ್ಯಮಂತ್ರಿಗಳು ಅವರ ರಾಜೀನಾಮೆ ಪಡೆಯಬೇಕೆಂದು ಎಬಿವಿಪಿ ಆಗ್ರಹಿಸುತ್ತದೆ.

ಈ ಪ್ರತಿಭಟನೆಯಲ್ಲಿ ರಾಜ್ಯ ಕಾರ್ಯದರ್ಶಿ ಪ್ರವೀಣ್.ಹೆಚ್.ಕೆ ರಾಜ್ಯ ಸಂಚಾಲಕ ಸಿದ್ದೇಶ್ ಯಾದವ್, ಚಿತ್ರಸ್ವಾಮಿ, ಮನೋಜ್, ರಾಘವೇಂದ್ರ, ಆಕಾಶ್, ಸಿಂಚನ, ಲಾವಣ್ಯ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶ್ರೀ ದುರ್ಗಾದೇವಿ ನೂತನ ದೇವಸ್ಥಾನ ಲೋಕಾರ್ಪಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಗ್ರಾಮದ ಶ್ರೀ ದುರ್ಗಾದೇವಿ ಸೇವಾ ಸಮಿತಿಯವತಿಯಿಂದ ಗ್ರಾಮ ದೇವತೆ ಶ್ರೀ ದುರ್ಗಾದೇವಿ ನೂತನ ದೇವಸ್ಥಾನ ಲೋಕಾರ್ಪಣೆ ಹಾಗೂ ಗೋಪುರ ಕಳಸಾರೋಹಣ ಸಮಾರಂಭವು ಜ. 4 ಮತ್ತು 5 ರಂದು ನಡೆಯಲಿದೆ.

ಜ. 04 ರಂದು ಬೆಳಿಗ್ಗೆ 8 ಗಂಟೆಗೆ ಗಂಗಾ ಪೂಜೆ, ಸಂಜೆ 6.30ರಿಂದ ದುರ್ಗಾ ಹೋಮ ಹಾಗೂ ನವಗ್ರಹ ಹೋಮ ನಂತರ ಮಹಾ ಮಂಗಳಾರತಿ ಕಾರ್ಯಕ್ರಮ ನಡೆಯಲಿದೆ.

ಜ. 5 ರಂದು ಬೆಳಿಗ್ಗೆ 7.45 ರಿಂದ 8.15ವರೆಗೆ ಸಲ್ಲುವ ಮಕರ ಲಗ್ನದಲ್ಲಿ ಕಳಸಾರೋಹನ ಕಾರ್ಯಕ್ರಮ ನಂತರ ಮಹಾಮಂಗಳಾರತಿ ನಡೆಯಲಿದೆ. ಗ್ರಾಮ ದೇವತೆ ಶ್ರೀದುರ್ಗಾದೇವಿ ದೇವಸ್ಥಾನದ ಉದ್ಘಾಟನೆಯನ್ನು ಶಾಸಕರಾದ ರಘುಮೂರ್ತಿನೇರವೇರಿಸಲಿದ್ದಾರೆ.ಅಧ್ಯಕ್ಷತೆಯನ್ನು ದಾನಿಗಳಾದ ಡಿ.ಎಲ್.ಭೀಮಾರೆಡ್ಡಿ ವಹಿಸಲಿದ್ದಾರೆ. ಮಧ್ಯಾಹ್ನ 12.30ಕ್ಕೆ ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆಯಲಿದೆ ಎಂದು ಶ್ರೀ ದುರ್ಗಾದೇವಿ ಸೇವಾ ಸಮಿತಿ ತಿಳಿಸಿದೆ.

### ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಅತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರಿಗೆ ಕಿತ್ತೂರು ರಾಣಿ ಚೆನ್ನಮ್ಮ" ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕರು ಕಛೇರಿ, , ದಾವಣಗೆರೆ ಇಲ್ಲಿ ಪಡೆದು ಜ.10 ರೊಳಗೆ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸರ್ಕಾರಿ ಬಾಲಕರ ಬಾಲಮಂದಿನ ಕಟ್ಟಡ, 14ನೇ ಮುಖ್ಯ ರಸ್ತೆ, ಕುವೆಂಪುನಗರ, ಎಂ.ಸಿ.ಸಿ 'ಬಿ' ಬ್ಲಾಕ್, ದಾವಣಗೆರೆ ದೂ. ಸಂ:08192-264056 ಇಲ್ಲಿಗೆ ಸಲ್ಲಿಸಬೇಕು ಎಂದು ಉಪ ನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಭಾಷಣ ಸ್ಪರ್ಧೆ

» ದಾವಣಗೆರೆ

ನೆಹರು ಯುವ ಕೇಂದ್ರದಿಂದ ನನ್ನ ಭಾರತ-ವಿಕಸಿತ್ ಭಾರತ ಕುರಿತ@2047 ವಿಷಯದ ಕುರಿತು ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆಯನ್ನು ಜ.11 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಬಿ.ಎಸ್.ಚನ್ನಬಸಪ್ಪ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸುವರು 15 ರಿಂದ 29 ವರ್ಷ ವಯೋಮಾನದೊಳಗಿರಬೇಕು. ಜ.10 ರೊಳಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ನಂ :9901863789 ಸಂಪರ್ಕಿಸಲು ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಭುಕ್ಯಾ ಸಂಜೀವ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ರಾಜ್ಯ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದಿಂದ ಆಯೋಜಿಸಿರುವ ಇಂಡಿಯಾ ಸ್ಕಿಲ್ ಕರ್ನಾಟಕ ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಒಟ್ಟು 57 ವಿವಿಧ ಕೌಶಲ್ಯಾ. ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ. ಭಾಗವಹಿಸುವರು ವೆಬ್ ಸೈಟ್ https://wwwskillindiadigital.gov.in/home ನಲ್ಲಿ ನೊಂದಾಣ ಿಮಾಡಿಕೊಳ್ಳಬ ಹುದಾಗಿದೆ. ಅರ್ಜಿ ಸಲ್ಲಿಸಲು ಜ.7 ಕೊನೆಯ ದಿನವಾಗಿರುತ್ತದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಜಂಟಿ ನಿರ್ದೇಶಕರಾದ ಬಸನಗೌಡ ತಿಳಿಸಿದ್ದಾರೆ.

### ಇ-ಸ್ವತ್ತು: 5 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ನಗರಸಭೆ ಸದಸ್ಯ, ಕ್ಲರ್ಕ್ ಲೋಕಾಯುಕ್ತ ಬಲೆಗೆ

» ಚಿತ್ರದುರ್ಗ

ಇ-ಸ್ವತ್ತು ಮಾಡಿಸಿಕೊಡಲು 5 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ವೇಳೆ ನಗರಸಭೆ ಸದಸ್ಯ ಮತ್ತು ಕ್ಲರ್ಕ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.ಹಿರಿಯೂರು ನಗರಸಭೆ ಪಕ್ಷೇತರ ಸದಸ್ಯ ಡಿ.ಸಣ್ಣಪ್ಪ ಮತ್ತು ನಗರಸಭೆ,ಎಸ್ ಡಿ.ಸಿ, ಕ್ಲರ್ಕ್ ರಮೇಶ್ ಅವರು ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದು ಅವರಿಬ್ಬರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.ನಗರದ ಪಿ.ನಟರಾಜು ಅವರ ಮನೆಯ ಇ-ಸ್ವತ್ತು ಮಾಡಿಕೊಡಲು 5 ಸಾವಿರ ರೂಪಾಯಿಗೆ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಮಂಗಳವಾರ ಬೆಳಿಗ್ಗೆ ಲಂಚ ಸ್ವೀಕರಿಸುವಾಗ ಇಬ್ಬರನ್ನೂ ಹಿರಿಯೂರು ಬಸ್ ನಿಲ್ದಾಣದ ಬಳಿ ವಶಕ್ಕೆ ಪಡೆಯಲಾಗಿದೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ.ಲೋಕಾಯುಕ್ತ ಎಸ್ಪಿ ವಾಸುದೇವರಾಮ್, ಡಿವೈಎಸ್ಪಿ ಮೃತ್ಯುಂಜಯ ನೇತೃತ್ವದಲ್ಲಿ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ

# ಸಾಮಾಜಿಕ ಶಿಲ್ಪಿಗಳಂತೆ ಕಾರ್ಯ ನಿರ್ವಹಿಸುವ ವಕೀಲರು: ಡಿಸ್ಟ್ರಿಕ್ ಜಡ್ಜ್ ರಾಜೇಶ್ವರಿ ಎನ್.ಹೆಗಡೆ

» ದಾವಣಗೆರೆ



ನ್ಯಾಯ ವಿತರಣೆ ವ್ಯವಸ್ಥೆಯಲ್ಲಿ ವಕೀಲರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವಲ್ಲಿಯೂ, ಸಾಮಾಜಿಕ ಶಿಲ್ಪಿಗಳಾಗಿ ಕಾರ್ಯ ನಿರ್ವಹಿಸುತ್ತಿರುವುದು ಪ್ರಶಂಶನೀಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ವಕೀಲರ ಸಂಘದಲ್ಲಿ ಮಂಗಳವಾರಆಯೋಜಿಸಲಾಗಿದ್ದನೂತನ ವರ್ಷಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಪ್ರಶಂಸನಾ ಪತ್ರ ನೀಡಿ ಮಾತನಾಡಿದ ಅವರು, ವಕೀಲರ ಸಹಕಾರದಿಂದ ತುಳಿತಕ್ಕೆ ಒಳಗಾದ, ಸಮಾಜ ಕೆಳಸ್ತರದ ಮತ್ತು ನ್ಯಾಯವಂಚಿತ ಜನರಿಗೆ ನ್ಯಾಯಾಂಗವು ಪರಿಣಾಮಕಾರಿಯಾಗಿ ನ್ಯಾಯ ವಿತರಣೆ ಮಾಡುವಲ್ಲಿ ಸಾಧ್ಯವಾಗಿದೆ. ಆ ನಿಟ್ಟಿನಲ್ಲಿ ವಕೀಲರ ಸೇವೆ ಅತ್ಯಂತ ಪ್ರಶಂಶನೀಯ ಎಂದು ಹೇಳಿದರು.

ಕಳೆದ ಬಾರಿಯ ಲೋಕ್ ಅದಾಲತ್‌ನಲ್ಲಿ ಅತಿ ಹೆಚ್ಚು ಪ್ರಕರಣಗಳನ್ನು ಇತ್ಯರ್ಥ ಪಡಿಸಿದ್ದಕ್ಕಾಗಿ ಕರ್ನಾಟಕ ಉಚ್ಚ ನ್ಯಾಯಾಲಯವು ದಾವಣಗೆರೆ ಜಿಲ್ಲಾ ವಕೀಲರ ಸಂಘಕ್ಕೆ ಪ್ರಶಂಸಾ ಪತ್ರ ನೀಡಿದ್ದು, ದಾವಣಗೆರೆ ವಕೀಲರ ಸಹಕಾರದಿಂದ 2ನೇ ಬಾರಿಗೆ ಪ್ರಶಂಸನಾ ಪತ್ರ ಪಡೆಯುತ್ತಿರುವುದು ಹೆಮ್ಮೆಯ ವಿಚಾರ ಎಂದು ಹರ್ಷ ವ್ಯಕ್ತ ಪಡಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವಿಜಯಾನಂದ, ನ್ಯಾಯ ವಿತರಣೆಯಲ್ಲಿ ದಾವಣಗೆರೆಯ ವಕೀಲರ ಸಂಘದ ಸದಸ್ಯರು ನೀಡುತ್ತಿರುವ ಸಹಕಾರ ಶ್ಲಾಘನೀಯ. ನ್ಯಾಯಾಂಗವು ಇಂದು ಶಾಸಕಾಂಗ, ಕಾರ್ಯಾಂಗದ ಕಾವಲಾಗಿ ಕೆಲಸ ನಿರ್ವಹಿಸುತ್ತಿದೆ ಎಂದು ಹೇಳಿದರು.ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಮಾತನಾಡಿ, ವಕೀಲರ ಸಂಪೂರ್ಣ ಸಹಕಾರದಿಂದ ಜಿಲ್ಲಾ ವಕೀಲರ ಸಂಘವು ಲೋಕ್ ಅದಾಲತ್‌ನಲ್ಲಿ ಅತಿ ಹೆಚ್ಚು ಪ್ರಕರಣಗಳನ್ನು ಇತ್ಯರ್ಥ ಪಡಿಸಿದ್ದು, ಆ ನಿಟ್ಟಿನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯವು 2ನೇ ಬಾರಿಗೆ ನೀಡಿರುವ ಪ್ರಶಂಸನಾ ಪತ್ರ ಇಡೀ ವಕೀಲ ಸಮುದಾಯಕ್ಕೆ ಸಂದ ಗೌರವ ಎಂದು ಸಂತಸ ವ್ಯಕ್ತ ಪಡಿಸಿದರು.ಮಕ್ಕಳ ಸ್ನೇಹಿ ನ್ಯಾಯಾಲಯದ ನ್ಯಾಯಾಧೀಶರಾದ ಎನ್.ಶ್ರೀಪಾದ್, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಧಶರಥ್, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪ್ರವೀಣ್‌ಕುಮಾರ್, ಪ್ರಧಾನಹಿರಿಯಸಿವಿಲ್‌ನ್ಯಾಯಾಧೀಶರಾದ ಶಿವಪ್ಪ ಜಿ.ಸಲಗರೆ ವೇದಿಕೆಯಲ್ಲಿ ಇದ್ದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ್, ವಕೀಲರಾದ ಡಿ.ವಿಜಯಪ್ರಕಾಶ್, ಕೆ.ಎಂ. ಮಲ್ಲಿಕಾರ್ಜುನ, ಎನ್.ಎಂ.ಆಂಜನೇಯ, ಲೋಕಿಕೆರೆ ಸಿದ್ದಪ್ಪ ಮಾತನಾಡಿದರು.

ಈ ವೇಳೆ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜ್, ಸಹಕಾರ್ಯದರ್ಶಿ ಎ.ಎಸ್.ಮಂಜುನಾಥ್, ಕಾರ್ಯಕಾರಿ ಸಮಿತಿ ಸದಸ್ಯರಾದ ವಾಗೀಶ್ ಕಟ್ಟಿಗೆಹಳ್ಳಿಮಠ್, ಎಲ್.ನಾಗರಾಜ್, ಟಿ.ಹೆಚ್.ಮಧುಸೂಧನ್, ಎಂ.ಚೌಡಪ್ಪ, ಕೆ.ಎಂ.ನೀಲಕಂಠಯ್ಯ ಇತರರು ಇದ್ದರು.

# ನಗರಸಭೆ ಬಜೆಟ್ ಹಿನ್ನೆಲೆ: ಸಾರ್ವಜನಿಕ ಅಭಿಪ್ರಾಯ ಪಡೆದ ಅಧಿಕಾರಿಗಳು

» ಚಳ್ಳಕೆರೆ



ಜಿಲ್ಲೆಯಲ್ಲೇ ಹೆಚ್ಚು ಪ್ರಾಧಾನ್ಯತೆ ಹೊಂದಿರುವ ಚಳ್ಳಕೆರೆ ನಗರಸಭೆ ಪ್ರತಿವರ್ಷವೂ ಬಜೆಟ್ ಸಿದ್ದಪಡಿಸುವ ಮುನ್ನ ಪೂರ್ವಭಾವಿಯಾಗಿ ನಗರಸಭೆಯ ಚುನಾಯಿತ ಜನಪ್ರತಿನಿಧಿಗಳು, ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅವರಿಂದ ಮಾಹಿತಿ ಪಡೆದು ಆಯವ್ಯಯದಲ್ಲಿ ಮಂಡಿಸುವ ಕುರಿತು ಚರ್ಚೆ ನಡೆಸುವರು.

ಈ ಹಿನ್ನೆಲೆಯಲ್ಲಿ ಮಂಗಳವಾರ ನಗರಸಭೆ ಸಭಾಂಗಣದಲ್ಲಿ ಪೂರ್ವಭಾವಿಯಾಗಿ ಸಾರ್ವಜನಿಕಸಭೆಯನ್ನು ಕರೆಯಲಾಗಿದ್ದು ಔಪಚಾರಿಕವಾಗಿ ಪೌರಾಯುಕ್ತ ಸಿ.ಚಂದ್ರಪ್ಪ ಎಲ್ಲರನ್ನೂ ಸ್ವಾಗತಿಸಿ ಉಪಯುಕ್ತ ಸಲಹೆ ಮಾಹಿತಿ ನೀಡುವಂತೆ ವಿನಂತಿಸಿದರು. ಪೂರ್ವಭಾವಿ ಸಮಾಲೋಚನಾ ಸಭೆಯಲ್ಲಿ ನಗರಸಭೆಯ ಬಹುತೇಕ ಚುನಾಯಿತ ಸದಸ್ಯರು ಗೈರು ಹಾಜರಾಗುವ ಮೂಲಕ ಸಾರ್ವಜನಿಕ ಚರ್ಚೆಗೆ ಗ್ರಾಸವಾದರು. ನಗರಸಭಾ ಸದಸ್ಯರಾದ ಶಿವಕುಮಾರ್, ಮಂಜುಳಾ, ತಿಪ್ಪಮ್ಮ, ನಾಗವೇಣಿ, ಟಿ.ಮಲ್ಲಿಕಾರ್ಜುನ್ ಮಾತ್ರ ಸಭೆಗೆ ಹಾಜರಾಗಿದ್ದರು.

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್ ಮಾತನಾಡಿ, ಹಳೇನಗರಕ್ಕೆ ವೀರಭದ್ರಸ್ವಾಮಿ ನಗರ ಎಂದು ನಾಮಕರಣ ಮಾಡುವಂತೆ ಸಲಹೆ ನೀಡಿದರು. ಕಳೆದ ಹಲವಾರು ಪೂರ್ವಭಾವಿ ಸಭೆಗಳಲ್ಲಿ ಚಳ್ಳಕೆರೆ ನಾಗರೀಕರ ಹಿತದೃಷ್ಟಿಯಿಂದ ಎಲ್ಲಾ ರಸ್ತೆಗಳನ್ನು ವಿಸ್ತರಣೆಗೊಳಿಸುವಂತೆ ಮನವಿ ಮಾಡಲಾಗಿತ್ತು. ವಿಶೇಷವಾಗಿ ಬಳ್ಳಾರಿ ಹಾಗೂ ಪಾವಗಡ ರಸ್ತೆಗಳು ಜನನಿಬಿಡ ರಸ್ತೆಗಳಾಗಿದ್ದು ಇಲ್ಲಿ ಓಡಾಡಲು ಸಾರ್ವಜನಿಕರು ಹೆಚ್ಚು ಪ್ರಯಾಸಪಡಬೇಕಾಗುತ್ತದೆ. ಆದರೆ, ಈ ಬಗ್ಗೆ ನಗರಸಭೆ ಯಾವುದೇ ಕ್ರಮಕೈಗೊಳ್ಳುತ್ತಿಲ್ಲ. ಬಳ್ಳಾರಿ ರಸ್ತೆಯಲ್ಲಿ ಸಂಚರಿಸುವಾಗ ಪ್ರಾಣವನ್ನು ಕೈಯಲ್ಲಿಡಿದು ಓಡಾಡುವ ಸ್ಥಿತಿ ಇದೆ ಎಂದರು.

ಹಿರಿಯ ವಾಣಿಜ್ಯೋದ್ಯಮಿ ಎಚ್.ಗಂಗಣ್ಣ, ಸಾಂತ್ವನ ಕೇಂದ್ರದ ತಿಪ್ಪೇಸ್ವಾಮಿ, ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಬೇಕು, ವಿಶೇಷವಾಗಿ ಪ್ರತ್ಯೇಕವಾಗಿ ಮಹಿಳೆಯರಿಗೆ ಶೌಚಾಲಯವಿರಬೇಕು. ಬೇರೆ ಕಡೆಯಿಂದ ಬರುವ ಸಾರ್ವಜನಿಕರು ಚಳ್ಳಕೆರೆ ಜನರನ್ನು ಶಪಿಸುವಂತೆ ಆಗಬಾರದು. ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಕನಿಷ್ಠ ಪಕ್ಷ ಎಡರಂತೆ ಒಟ್ಟು 8 ಶೌಚಾಲಯ ನಿರ್ಮಿಸಲು ಸಲಹೆ ನೀಡಿದರು. ಮದ್ಯ ಪ್ರವೇಶಿಸಿ ಮಾತನಾಡಿದ ಪೌರಾಯುಕ್ತ,ಎರಡು ಶೌಚಾಲಯಗಳು ಮಂಜೂರಾಗಿದ್ದು ಪರಿಸ್ಥಿತಿಅವಲೋಕಿಸಿ ಮಾಡುವ ಭರವಸೆ ನೀಡಿದರು.

ವಕೀಲ ಓ.ಪಾಪಣ್ಣ, ಟಿ.ವೀರಭದ್ರಪ್ಪ ಮಾತನಾಡಿ, ಚಳ್ಳಕೆರೆ ನಗರದಲ್ಲಿ ಹಾಲಿ ಇರುವ ಕೆಲವೇ ಪಾರ್ಕ್‌ಗಳ ನಿರ್ವಹಣೆ ಸರಿಯಾಗಿಲ್ಲ. ಸರ್ಕಾರದಿಂದ ಎಸ್ಸಿಎಸ್ಟಿ ಸಮುದಾಯಕ್ಕೆ ಬರುವ ಎಸ್‌ಇಪಿ, ಟಿಎಸ್‌ಪಿ ಅನುದಾನ ಬಳಕೆಯಲ್ಲಿ ಪಾರದರ್ಶಕತೆಯನ್ನು ಕಾಪಾಡಬೇಕು. ಯಾವುದೇ ಕಾರಣಕ್ಕೂ ಈ ಹಣ ಬೇರೆ ಕೆಲಸಕ್ಕೆ ಉಪಯೋಗಿಸಬಾರದು ಎಂದರು.

ಕಾಂಗ್ರೆಸ್ ಪಕ್ಷದ ಕುಶಲಕರ್ಮಿ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಕಳೆದ ಸುಮಾರು ಎಂಟು ತಿಂಗಳಿನಿಂದ ನಗರಸಭೆಗೆ ಅಧ್ಯಕ್ಷ, ಉಪಾಧ್ಯಕ್ಷರಿಲ್ಲ. ಜಿಲ್ಲಾಧಿಕಾರಿಗಳು ಆಡಳಿತಾಧಿಕಾರಿಗಳಾಗಿದ್ದು ಅವರು ಈ ಸಭೆಯಲ್ಲಿ ಹಾಜರಿಲ್ಲ. ಇಲ್ಲಿ ವ್ಯಕ್ತವಾಗುವ ಸಾರ್ವಜನಿಕ ಅಭಿಪ್ರಾಯಗಳನ್ನು ಜಿಲ್ಲಾಧಿಕಾರಿಗಳು ಕೇಳಬೇಕಿತ್ತು. ಅವರನ್ನು ಹೊರತು ಪಡಿಸಿಸಭೆ ಮಾಡುವುದರಿಂದ ಯಾವುದೇ ಪ್ರಯೋಜನವಾಗದು ಎಂದು ಅಸಮದಾನ ವ್ಯಕ್ತಪಡಿಸಿದರು.

ಸಮಾಜ ಸೇವಕ ಎಚ್.ಎಸ್.ಸೈಯದ್ ಮಾತನಾಡಿ, ರಸ್ತೆಗಳ ಅಗಲೀಕರಣ ದುರಸ್ಥಿ ನಿಯಮಬದ್ದವಾಗಿ ಆಗುತ್ತಿಲ್ಲ. ರಸ್ತೆ ನಿರ್ಮಿಸುವ ಸಂದರ್ಭದಲ್ಲಿ ಕೆಲವೆಡೆ ನೀರಿನ ಪೈಪ್ ಒಡೆದು ಅವುಗಳ ರಿಪೇರಿ ಬಗ್ಗೆ ಗಮನಹರಿಸಿಲ್ಲ. ಚಳ್ಳಕೆರೆ ನಗರದ ಜನಸಂಖ್ಯೆ 70 ಸಾವಿರ ದಾಟಿದ್ದು ಎಲ್ಲಾ ವಾರ್ಡ್‌ಗಳಲ್ಲೂ ಉದ್ಯಾನವನಗಳನ್ನು ನಿರ್ಮಿಸಬೇಕು. ಉದ್ಯಾನವನವಿದ್ದರೆ ಉತ್ತಮ ಗಾಳಿ, ಬೆಳಕು ದೊರೆಯುವುದಲ್ಲದೆ ವಯೋವೃದ್ದರಿಗೆ ಅದು ನೆಮ್ಮದಿಯ ತಾಣವಾಗುತ್ತದೆ ಎಂದರು. ಹಿರಿಯೂರಿನ ಅರುಣ್‌ಕುಮಾರ್ ಮಾತನಾಡಿ, ಇ-ಸ್ವತ್ತು ವಿಚಾರವಾಗಿ ಕಳೆದ ಆರು ತಿಂಗಳಿನಿಂದ ಎಂಟು ಸಾರಿ ನಗರಸಭೆಗೆ ಬಂದಿದ್ದೇನೆ. ಸಂಬಂಧಪಟ್ಟವರು ಇಲ್ಲದ ಸಬೂಬು ಹೇಳಿ ಕಳಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಪೌರಾಯುಕ್ತ ಚಂದ್ರಪ್ಪ ಉತ್ತರಿಸಿ ಮುಂದಿನ ಸಾರಿ ನನ್ನನ್ನು ಬೇಟಿ ಮಾಡಿ ನಿಮ್ಮ ಸಮಸ್ಯೆಗೆ ಪರಿಹಾರ ನೀಡುವೆ ಎಂದರು.

## ಸ್ಕೌಟ್ಸ್, ಗೈಡ್ಸ್‌ನಿಂದ ವ್ಯಕ್ತಿತ್ವ ವಿಕಸನ, ಕಲಿಕೆಯಲ್ಲೂ ಪ್ರಗತಿ



» ಚನ್ನಗಿರಿ

ಸುಂದರ ಬದುಕು ಹಾಗೂ ಆರೋಗ್ಯಕರ ಸಮಾಜ ಕಟ್ಟುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್‌ನ ಶಿಸ್ತು ಮತ್ತು ಕೌಶಲ್ಯದ ಪಾತ್ರ ಮಹತ್ವದ್ದಾಗಿದೆ.ಮಕ್ಕಳು ನಾಲ್ಕು ಗೋಡೆಗಳ ನಡುವೆ ಓದು-ಬರಹ ಕಲಿಯುವುದರ ಜತೆಗೆ ನಿಸರ್ಗದ ಮಡಿಲಲ್ಲಿ ಒಂದಾಗಿ ಬೆರೆತು, ಸಮನ್ವಯದಿಂದ ಬಾಳಲು ಕಲಿಯುವಂತೆ ಪ್ರೇ[illegible]ರಿಸುವ ಕಾರ್ಯಕ್ರಮ ಹೆಚ್ಚಾಗಿ ನಡೆಯಬೇಕಿದೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಕಾಕನೂರು ಗ್ರಾಮದಲ್ಲಿ ನಡೆದ ಸ್ಕೌಟ್ಸ್ ಮತ್ತು ಗೈಡ್ಸ್ ಶಿಬಿರ ಉದ್ಘಾಟನೆ ಮಾಡಿ ಈ ವಿಷಯ ತಿಳಿಸಿದರು. ಸ್ಕೌಟ್ಸ್ ಮತ್ತು ಗೈಡ್ಸ್ ಸೇರ್ಪಡೆಯಿಂದ ವಿದ್ಯಾರ್ಥಿಯ ವ್ಯಕ್ತಿತ್ವ ವಿಕಸನದ ಜತೆಗೆ ಕಲಿಕೆಯಲ್ಲೂ ಪ್ರಗತಿ ಸಾಧಿಸಲು ಸಾಧ್ಯ. ಹಾಗಾಗಿ ಎಲ್ಲಾ ಶಾಲಾ ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್‌ಗೆ ಸೇರ್ಪಡೆಗೊಳ್ಳಲು ಮುಂದಾಗಬೇಕು ಎಂದರು.ಮುಂದಿನ ಪೀಳಿಗೆಗೆ ಉತ್ತಮ ನಾಗರಿಕರನ್ನು ನಿರ್ಮಾಣ ಮಾಡುವ ಕೆಲಸ ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದಾಗಬೇಕು. ಮನುಷ್ಯನಿಗೆ ಸಂತೋಷ ಮತ್ತು ಆನಂದ ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ಸಿಗಲು ಸಾಧ್ಯ.ಎಲ್ಲಾ ಶಾಲೆಗಳಲ್ಲಿಯೂ ಸ್ಕೌಟ್ಸ್ ಮತ್ತು ಗೈಡ್ಸ್‌ನ ಚಟುವಟಿಕೆಗಳನ್ನು ಪ್ರಾರಂಭಿಸಬೇಕು ಎಂಬ ಆಶಯ ನಮ್ಮದು ಎಂದು ಹೇಳಿದರು. ತರಬೇತಿ ಶಿಬಿರದಲ್ಲಿ ಆಯೋಜಕರು, ಶಿಕ್ಷಣ ಇಲಾಖೆ ಅಧಿಕಾರಿಗಳು ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

## ಗುಂಜನ್ ಕೃಷ್ಣ ಅವರ ಜಿಲ್ಲಾ ಪ್ರವಾಸ

ದಾವಣಗೆರೆ: ಕೈಗಾರಿಕಾ ಅಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ನಿರ್ದೇಶಕರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಗುಂಜನ್ ಕೃಷ್ಣ ಅವರು ಜ.5 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಜ.5 ರಂದು ಬೆ. 7 ಗಂಟೆಗೆ ಬೆಂಗಳೂರಿನಿಂದ ಹೊರಟು 10.45ಕ್ಕೆ ದಾವಣಗೆರೆ ಆಗಮಿಸುವರು. ಬೆ.11 ಗಂಟೆಗೆ ಜಿಲ್ಲಾಧಿಕಾರಿಗಳು ಮತ್ತು ಜಿ.ಪಂ ಸಿಇಓ ಹಾಗೂ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮ. 12.30ಕ್ಕೆ ನಗರದ ಅಮ್ಮ ಅಸೋಷಿಯೇಶನ್ಸ್ ಇವರೊಂದಿಗೆ ಸಭೆ ನಡೆಸುವರು.

**ಪ್ರಮುಖ ಸುದ್ದಿ**

# ಬಹುವಿಧ ಚಿಕಿತ್ಸಾ ವಿಧಾನದಿಂದ ಕುಷ್ಠರೋಗ ಗುಣ

» ಚಿತ್ರದುರ್ಗ



ಸೂಕ್ತ ಸಮಯದಲ್ಲಿ ಬಹುವಿಧ ಚಿಕಿತ್ಸಾ ವಿಧಾನದಿಂದ ಕುಷ್ಟರೋಗ ಗುಣಮುಖವಾಗುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಯಳಗೋಡು ಮತ್ತು ಬಸ್ತಿಹಳ್ಳಿ ಗ್ರಾಮಗಳಲ್ಲಿ ಮಂಗಳವಾರ ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಕುಷ್ಟರೋಗ ಪ್ರಕರಣ ಪತ್ತೆ ಅಂದೋಲನ ಕಾರ್ಯಕ್ರಮ ಮೇಲ್ವಿಚಾರಣೆ ನಡೆಸಿ ಅವರು ಮಾತನಾಡಿದರು.

2023ರ ಡಿಸೆಂಬರ್ 27 ರಿಂದ 2024ರ ಜನವರಿ 11 ರವರೆಗೆ ತಾಲ್ಲೂಕಿನ ಎಲ್ಲಾ ಗ್ರಾಮಗಳಲ್ಲಿ ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನ ನಡೆಸಲಾಗುತ್ತಿದೆ. ಪ್ರತಿ ಗ್ರಾಮಗಳಲ್ಲಿ ನಿತ್ಯವೂ 20 ಮನೆಗಳ ಭೇಟಿ ಪ್ರತಿ ತಂಡಕ್ಕೆ ಕುಷ್ಟರೋಗ ಪತ್ತೆ ಹಚ್ಚುವ ಮಹಿಳಾ ಮತ್ತು ಪುರುಷ ಪ್ರತಿನಿಧಿಗಳನ್ನು ತರಬೇತಿ ನೀಡಿ ಕುಷ್ಟರೋಗ ಪತ್ತೆ ಹಚ್ಚುವುದು. ಮಾಹಿತಿ ಶಿಕ್ಷಣ ಸಂವಹನ ಚಟುವಟಿಕೆಗಳನ್ನ ಜರುಗಿಸುವುದು. ವರದಿಗಳನ್ನು ಸಲ್ಲಿಸುವುದು. ಶಂಕಿತ ಪ್ರಕರಣಗಳನ್ನು ಪತ್ತೆ ಹಚ್ಚಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಿಂದ ತಪಾಸಣೆ ನಡೆಸುವುದು ಮತ್ತು ಜಿಲ್ಲಾಮಟ್ಟದ ಪರಿಣಿತರಿಂದ ಪರೀಕ್ಷೆಗೆ ಒಳಪಡಿಸುವುದು. ರೋಗ ಖಚಿತತೆ ಪಡಿಸಿಕೊಂಡ ನಂತರ ಬಹುವಿಧ ಔಷಧ ಚಿಕಿತ್ಸೆಗೆ ಒಳಪಡಿಸುವುದಾಗಿದೆ ಎಂದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಕುಷ್ಠರೋಗದ ನಿರ್ಮೂಲನೆಯನ್ನು ಸಾಧಿಸಲಾಗಿದೆಯಾದರೂ, ಇನ್ನೂ ಕೆಲವು ವರ್ಷಗಳವರೆಗೆ ಹೊಸ ಪ್ರಕರಣಗಳು ಸಂಭವಿಸುತ್ತಲೇ ಇರುತ್ತವೆ. ಸಮಾಜದಲ್ಲಿ ಮತ್ತೆ ರೋಗ ಕಾಣಿಸಿಕೊಳ್ಳದಂತೆ ನಿರಂತರ ನಿಗಾ ವಹಿಸಬೇಕು. ಆರಂಭದಲ್ಲಿ ವಾರ್ಷಿಕ ಹೊಸ ಪ್ರಕರಣ ಪತ್ತೆ ದರ ಗಮನಾರ್ಹ ಕುಸಿತವನ್ನು ತೋರಿಸಿದೆ ಎಂದರು.

ಹಲವಾರು ಶತಮಾನಗಳಿಂದ ಕುಷ್ಠರೋಗವು ಒಂದು ಭಯಾನಕ, ಗುಣಪಡಿಸಲಾಗದ ಕಾಯಿಲೆಯಾಗಿ ಉಳಿದಿದೆ. ರೋಗಿಗಳನ್ನು ಅಸಹ್ಯದಿಂದ ನೋಡಲಾಯಿತು, ಬಹಿಷ್ಕರಿಸಲಾಯಿತು ಮತ್ತು ಅಮಾನವೀಯ ಚಿಕಿತ್ಸೆಗೆ ಒಳಪಡಿಸಲಾಯಿತು. ಇಂದು, ಕುಷ್ಠರೋಗದ ವಿರುದ್ಧದ ಕಳಂಕ ಮತ್ತು ಪೂರ್ವಾಗ್ರಹ ಗಣನೀಯವಾಗಿ ಕಡಿಮೆಯಾಗಿದೆ ಮತ್ತು ರೋಗದ ವಿನಾಶಗಳು ಸಮುದಾಯದಲ್ಲಿ ವಿರಳವಾಗಿ ಕಂಡುಬರುತ್ತವೆ. ರೋಗವನ್ನು ಗುಣಪಡಿಸಲು ಪರಿಣಾಮಕಾರಿ ಔಷಧಿಗಳ ಲಭ್ಯತೆ, ಆರಂಭಿಕ ರೋಗನಿರ್ಣಯಕ್ಕೆ ತಂತ್ರಜ್ಞಾನದ ಪ್ರವೇಶ, ವಿರೂಪಗಳನ್ನು ತಡೆಗಟ್ಟುವುದು ಮತ್ತು ಸರಿಪಡಿಸುವುದು ಮತ್ತು ಕುಷ್ಠರೋಗದ ಬಗ್ಗೆ ಸಮಾಜದಲ್ಲಿ ಹೆಚ್ಚಿದ ಜಾಗೃತಿಯಿಂದಾಗಿ ಇದು ಸಾಧ್ಯವಾಗಿದೆ. ಸಾರ್ವಜನಿಕ ಆರೋಗ್ಯ ಮಟ್ಟದಲ್ಲಿ ಇದು ಪ್ರಸರಣ ಮತ್ತು ರೋಗದ ಹರಡುವಿಕೆಯ ಪರಿಣಾಮಕಾರಿ ನಿಯಂತ್ರಣಕ್ಕೆ ಕಾರಣವಾಗಿದೆ. ನಾವು ಯಶಸ್ವಿಯಾಗಿ ನಿರ್ಮೂಲನೆಯನ್ನು ಸಾಧಿಸಿದ್ದೇವೆ ಮತ್ತು ಈಗ ಕುಷ್ಠರೋಗದ ನಿರ್ಮೂಲನೆಯತ್ತ ಸಾಗುತ್ತಿದ್ದೇವೆ. ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನ ಪ್ರತಿ ವರ್ಷದಂತೆ ಈ ವರ್ಷವೂ ಸಹ ನಡೆಸಲಾಗುತ್ತಿದೆ. ಶೀಘ್ರ ಪತ್ತೆ ತ್ವರಿತ ಚಿಕಿತ್ಸೆ ನೀಡುವುದರಿಂದ ಕುಷ್ಠ ರೋಗವು ಗುಣಮುಖವಾಗುತ್ತದೆ ಎಂದರು.

ಯಳಗೋಡು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಸುಶ್ಮಿತಾ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಒಟ್ಟು 16 ಹಳ್ಳಿಗಳು ಇರುತ್ತವೆ. ಒಂದು ಕುಷ್ಟರೋಗದ ಪ್ರಕರಣ ಈ ಸಮುದ್ರ ಗೊಲ್ಲರಹಟ್ಟಿಯಲ್ಲಿ ಮೂರು ತಿಂಗಳಿನಿಂದ ಚಿಕಿತ್ಸೆ ಪಡೆಯುತ್ತಲಿದ್ದಾರೆ. 15 ತಂಡಗಳಲ್ಲಿ 30 ಪ್ರತಿನಿಧಿಗಳು ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿರುತ್ತಾರೆ. ಈವರೆಗೂ 153 ಮನೆಗಳ ಸಮೀಕ್ಷೆ ನಡೆಸಲಾಗಿದೆ. 43 ಶಂಕಿತ ಪ್ರಕರಣಗಳನ್ನು ಪತ್ತೆ ಹಚ್ಚಿ ಹೆಚ್ಚಿನ ಪರೀಕ್ಷೆಗೆ ಒಳಪಡಿಸಿ ಕುಷ್ಟರೋಗ ಇರುವುದಿಲ್ಲ ಎಂದು ಖಚಿತತೆ ಪಡಿಸಲಾಗಿದೆ ಎಂದರು.

ಕುಷ್ಟರೋಗ ಪತ್ತೆ ಅಭಿಯಾನದಲ್ಲಿ ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಕುಮಾರ್, ಸಮುದಾಯ ಆರೋಗ್ಯ ಅಧಿಕಾರಿ ಶಾಲಿನಿ, ಆರೋಗ್ಯ ಸುರಕ್ಷತಾ ಅಧಿಕಾರಿ ರುಕ್ಮಿಣಿ, ಆಶಾ ಕಾರ್ಯಕರ್ತೆಯರು ಸಾರ್ವಜನಿಕರು ಇದ್ದರು.

**ಫಾಸ್ಟ್ ನ್ಯೂಸ್**

## ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ಪ್ರಸ್ತಾವನೆಗಳ ಆಹ್ವಾನ

» **ಚಿತ್ರದುರ್ಗ**

2023-24ನೇ ಸಾಲಿನ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ ಸಲುವಾಗಿ ಜಿಲ್ಲೆಯಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ. ಜನವರಿ 10 ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನ. ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಯಲ್ಲಿ ಪ್ರತಿಬಿಂಬಿಸಲು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಅವರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರತಿ ವರ್ಷ ಕಿತ್ತೂರು ರಾಣಿ ಚೆನ್ನಮ್ಮ ಇವರ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ.

ಅದರಂತೆ 2023-24ನೇ ಸಾಲಿಗೆ ಈ ಪ್ರಶಸ್ತಿಗಾಗಿ ಜಿಲ್ಲೆಯಲ್ಲಿ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಹಾಗೂ ವ್ಯಕ್ತಿಗಳನ್ನೊಳಗೊಂಡಂತೆ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರನ್ನು ಗುರುತಿಸಿ, ಪ್ರಸ್ತಾವನೆಗಳನ್ನು ಪಡೆದು ಪ್ರಧಾನ ಕಚೇರಿಗೆ ಸಲ್ಲಿಸಬೇಕಾಗಿರುತ್ತದೆ. ಪ್ರಶಸ್ತಿಗಾಗಿ ಅರ್ಹ ವ್ಯಕ್ತಿ, ಸಂಸ್ಥೆಗಳು, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಆವರಣ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಇವರಿಂದ ಅರ್ಜಿಯನ್ನು ಪಡೆದು ಪ್ರಸ್ತಾವನೆಗಳನ್ನು ದ್ವಿಪ್ರತಿಯಲ್ಲಿ ಜನವರಿ 10 ರೊಳಗಾಗಿ ಈ ಕಚೇರಿಗೆ ಸಲ್ಲಿಸಬೇಕಾಗಿದೆ. ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಆಯ್ಕೆಗೆ ನಿಗದಿಪಡಿಸಿರುವ ಷರತ್ತುಗಳು: ಕಿತ್ತೂರು ರಾಣಿಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಸ್ವಯಂ ಸೇವಾ ಸಂಸ್ಥೆ ಹಾಗೂ ವ್ಯಕ್ತಿಗಳು ಮಹಿಳೆಯರು ಅಭಿವೃದ್ಧಿಗಾಗಿ ಕನಿಷ್ಟ 5 ವರ್ಷಗಳ ಸೇವೆ ಸಲ್ಲಿಸಿರಬೇಕು. ಪ್ರಶಸ್ತಿಗೆ ಆಯ್ಕೆ ಮಾಡುವಾಗ ಸಂಸ್ಥೆ ಹಾಗೂ ವ್ಯಕ್ತಿ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಕೈಗೊಂಡ ಕಾರ್ಯಕ್ರಮಗಳ ಮತ್ತು ಇತರೆ ಕ್ಷೇತ್ರಗಳಾದ ಕ್ರೀಡಾ, ಕಲೆ, ಸಾಹಿತ್ಯ, ಶಿಕ್ಷಣ ಕ್ಷೇತ್ರಗಳಲ್ಲೂ ವ್ಯಕ್ತಿಗಳು ಕೈಗೊಂಡ ಕಾರ್ಯಕ್ರಮಗಳ ನಿರ್ವಹಣೆಯ ಗುಣಮಟ್ಟವನ್ನು ಆಧಾರವಾಗಿಟ್ಟುಕೊಳ್ಳಲಾಗುತ್ತದೆ. ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ. ಪ್ರಶಸ್ತಿಗೆ ಬರುವ ಅರ್ಜಿಗಳ ಪರಿಶೀಲನೆ ಮತ್ತು ಆಯ್ಕೆಗೆ ಸಂಬಂಧಿಸಿದಂತೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಈ ಪ್ರಶಸ್ತಿ ಪ್ರಧಾನವನ್ನು ಅಂತರರಾಷ್ಟ್ರೀಯ ಮಹಿಳಾ ದಿನಚರಣೆಯಂದು ಅಥವಾ ಸರ್ಕಾರವು ನಿಗದಿಪಡಿಸುವ ದಿನಾಂಕ ಹಾಗೂ ಸ್ಥಳಗಳಲ್ಲಿ ಏರ್ಪಡಿಸಲಾಗುವುದು. ಪ್ರಶಸ್ತಿಗೆ ಆಯ್ಕೆಯಾದ ವ್ಯಕ್ತಿಗಳು ಪ್ರಶಸ್ತಿಗಳನ್ನು ಖುದ್ದಾಗಿ ಪಡೆಯಬೇಕು. ಹಾಗೂ ಸಂಘ ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಯನ್ನು ಸಂಘದ ಪದಾಧಿಕಾರಿಗಳು ಸ್ವೀಕರಿಸಬಹುದಾಗಿದೆ. ವೀರ ಮಹಿಳೆ ಪ್ರಶಸ್ತಿಗೆ ಷರತ್ತುಗಳು: 18 ರಿಂದ 45 ವಯೋಮಿತಿಯೊಳಗಿನ ಒಬ್ಬ ಮಹಿಳೆಯು ಆಪತ್ಕಾಲದಲ್ಲಿರುವ ಮತ್ತೊಬ್ಬ ವ್ಯಕ್ತಿಯ ಜೀವ ಕಾಪಾಡುವಲ್ಲಿ ಅಥವಾ ಪ್ರಾಣ ರಕ್ಷಿಸುವಲ್ಲಿ ತನ್ನ ಜೀವದ ಹಂಗನ್ನು ತೊರೆದು ಸಮಯ ಪ್ರಜ್ಞೆಯಿಂದ ಧೈರ್ಯ, ಸಾಹಸದೊಂದಿಗೆ ಅಪಾಯದಲ್ಲಿರುವ ವ್ಯಕ್ತಿಯ ಜೀವ ಕಾಪಾಡುವಂತಹ ಕಾರ್ಯವನ್ನು ಮಾಡಿದಲ್ಲಿ ಅಂತಹ ಮಹಿಳೆಯರನ್ನು ವೀರ ಮಹಿಳೆ ಎಂದು ಪರಿಗಣಿಸಬಹುದು. ವೀರ ಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ವಿಶೇಷ ಶೌರ್ಯ ಹಾಗೂ ಸಾಧನೆಯನ್ನು ಮಾಡಿರಬೇಕು. ಈ ಸಾಧನೆಯು ಸಾರ್ವಜನಿಕರ ಗಮನಕ್ಕೆ ಬಂದಿರಬೇಕು. ಹಾಗೂ ಈ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 1 ರಿಂದ ಡಿಸೆಂಬರ್ 31ರ ಒಳಗೆ ಇರಬೇಕು. ಈ ಪ್ರಶಸ್ತಿ ಸಂಬಂಧಿಸಿದ ಮಹಿಳೆಯ ತಂದೆ, ತಾಯಿ, ಪೋಷಕರು ಅರ್ಜಿಯನ್ನು ಸಲ್ಲಿಸಬಹುದು. ವೀರ ಮಹಿಳೆ ಪ್ರಶಸ್ತಿಗಾಗಿ ರಾಜ್ಯ ವತಿಯಿಂದ ಒಬ್ಬ ಮಹಿಳೆಗೆ ಮಾತ್ರ ರೂ.25,000/-ಗಳ ನಗದು ಹಾಗೂ ಪ್ರಶಸ್ತಿ ನೀಡಲಾಗುವುದು. ಇದನ್ನು ಪ್ರತಿ ವರ್ಷ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಆವರಣ, ಚಿತ್ರದುರ್ಗ ಇಲ್ಲಿ ಸಂಪರ್ಕಿಸುವಂತೆ ಇಲಾಖೆಯ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಸಮಾಲೋಚಕರ ತರಬೇತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಜನ ಆರೋಗ್ಯ ಸಂಸ್ಥೆ, ಎಪಿಡೀಮಿಯಾಲಜಿ ವಿಭಾಗ, ನಿಮ್ಹಾನ್ಸ್, ಇವರಿಂದ ಹಾಗೂ ರಾಜ್ಯ ಸರ್ಕಾರದ ಅನುದಾನಿತ ಯೋಜನೆಯಾದ ಯುವ ಜನರ ಮಾನಸಿಕ ಆರೋಗ್ಯಕ್ಕೆ ಪೂರಕ ಯುವ ಸ್ಪಂದನ ಸೇವೆಗಳ ಸಮಗ್ರ ಅಭಿವೃದ್ಧಿ ಮತ್ತು ಅನುಷ್ಠಾನ ಯೋಜನೆ ಯುವ ಸ್ಪಂದನ ಅಡಿಯಲ್ಲಿರುವ ಯುವ ಪರಿವರ್ತಕರ ಹಾಗೂ ಯುವ ಸಮಾಲೋಚಕರ ತರಬೇತಿಗಾಗಿ ಯುವತಿ,ಯುವಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಯು 21 ರಿಂದ 35 ವರ್ಷದೊಳಗಿನ ವಯೋಮಾನದವರಾಗಿರಬೇಕು. ಪದವಿ ಹಾಗೂ ಮೇಲ್ಪಟ್ಟುಪದವಿ ತೇರ್ಗಡೆ ಹೊಂದಿದವರು ಅರ್ಜಿ ಸಲ್ಲಿಸಬಹುದು.

### ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

# ಜನರ ಅಹವಾಲು ತಿಂಗಳೊಳಗೆ ಪರಿಹರಿಸಿ











» **ಚಿತ್ರದುರ್ಗ**

ಜನತಾ ದರ್ಶನದಲ್ಲಿ ಸಾರ್ವಜನಿಕರು ನೀಡುವ ಅಹವಾಲುಗಳನ್ನು ತಿಂಗಳೊಳಗೆ ಪರಿಹರಿಸಿ, ಸೂಕ್ತ ರೀತಿಯಲ್ಲಿ ಸ್ಪಂದಿಸಬೇಕು ಎಂದು ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೊಳಲ್ಕೆರೆಯ ಸಂವಿಧಾನ ಸೌಧದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೊಳಲ್ಕೆರೆಯಲ್ಲಿ ಆಯೋಜಿಸಿರುವ ಜನತಾದರ್ಶನಕಾರ್ಯಕ್ರಮವನ್ನುಅತ್ಯಂತ ಅಚ್ಚುಕಟ್ಟಾಗಿ ಆಯೋಜಿಸಿರುವುದಕ್ಕೆ ಸಂತಸ ವ್ಯಕ್ತಪಡಿಸಿದ ಸಚಿವರು, ಜನತಾ ದರ್ಶನದಲ್ಲಿ ಸ್ವೀಕೃತವಾಗುವ ಸಾರ್ವಜನಿಕರಕುಂದುಕೊರತೆ,ಸಮಸ್ಯೆಗಳ ಅರ್ಜಿಗಳನ್ನು ಒಂದು ತಿಂಗಳೊಳಗೆ ವಿಲೇವಾರಿ ಮಾಡಬೇಕು. ಜನರಿಗೆ ಸೂಕ್ತವಾದ ಸ್ಪಂದನೆ ದೊರಕಬೇಕು. ಜನರ ಮನೆ ಬಾಗಿಲಿಗೆ ಸರ್ಕಾರದ ಸೌಲಭ್ಯ ತಲುಪಿಸಬೇಕು ಎಂದು ಈಗಾಗಲೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆ ಎಂದರು.

ಸಾರ್ವಜನಿಕರು ಪ್ರತಿನಿತ್ಯವೂ ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದ ಸರ್ಕಾರಿ ಕಚೇರಿಗಳಿಗೆ ಅಲೆದಾಟ ಮಾಡುವುದನ್ನು ತಪ್ಪಿಸಿ, ಜನರ ಬಳಿಗೇ ಅಧಿಕಾರಿಗಳು, ಜನಪ್ರತಿನಿಧಿಗಳು ತೆರಳಿ, ಜನರ ದೂರು ದುಮ್ಮಾನಗಳನ್ನು ಆಲಿಸಿ ಪರಿಹರಿಸಬೇಕೆಂಬುದು ನಮ್ಮ ಸರ್ಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಸೂಚನೆಯಂತೆ, ಜಿಲ್ಲೆಯಾದ್ಯಂತ ಜನತಾ ದರ್ಶನ ಕಾರ್ಯಕ್ರಮಗಳ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದು ಸಚಿವರು ಹೇಳಿದರು.

ಹೊಳಲ್ಕೆರೆ ಶಾಸಕ ಡಾ. ಎಂ.ಚಂದ್ರಪ್ಪ ಮಾತನಾಡಿ, ರಾಜ್ಯದಲ್ಲಿ ಹೊಸ ಸರ್ಕಾರ ಅಸ್ತಿತ್ವಕ್ಕೆಬಂದಮೇಲೆ,ಜನರಸಮಸ್ಯೆಗಳನ್ನು ಬಗೆಹರಿಸಲು ಮುಖ್ಯಮಂತ್ರಿಗಳು ಜನತಾ ದರ್ಶನ ಕಾರ್ಯಕ್ರಮವನ್ನು ಜಿಲ್ಲಾ ಹಾಗೂ ತಾಲ್ಲೂಕು ಹಂತದಲ್ಲಿ ಆಯೋಜಿಸಲು ಸೂಚನೆ ನೀಡಿದ್ದಾರೆ. ಜನರ ಮನೆ ಬಾಗಿಲಿಗೆ ತೆರಳಿ, ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ಉದ್ದೇಶ ಜನತಾ ದರ್ಶನ ಕಾರ್ಯಕ್ರಮ ಹೊಂದಿದೆ. ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಜಿಲ್ಲಾ ಕೇಂದ್ರಗಳಿಗೆ ಅಲೆದಾಟ ಮಾಡುವುದನ್ನು ತಪ್ಪಿಸಿ, ಸ್ಥಳದಲ್ಲಿಯೇ ಪರಿಹಾರ ನೀಡಲಾಗುವುದು. ಯಾವುದೇ ಸರ್ಕಾರವಿದ್ದರೂ ಸಾರ್ವಜನಿಕರ ಕಷ್ಟಗಳನ್ನು ಪರಿಹರಿಸಲು ಪ್ರಯತ್ನಿಸುತ್ತದೆ. ಹಿಂದಿನ ಸರ್ಕಾರದಲ್ಲಿ ಜಿಲ್ಲಾಧಿಕಾರಿ ನಡೆ ಹಳ್ಳಿಯ ಕಡೆ ಕಾರ್ಯಕ್ರಮ ನಡೆಸಲಾಗುತ್ತಿತ್ತು, ಈಗಿನ ಸರ್ಕಾರ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ, ಜನತಾದರ್ಶನ ಮೂಲಕ ಜನರನ್ನು ತಲುಪುವ ಕಾರ್ಯ ಮಾಡುತ್ತಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಜನರು ಸಲ್ಲಿಸಿದ ಅಲವಾಲುಗಳ ಇತ್ಯರ್ಥಕ್ಕೆ ಒಂದು ತಿಂಗಳ ಗಡುವು ನೀಡಲಾಗಿದೆ. ಪರಿಹಾರ ದೊರಕದಿದ್ದರೆ ಮತ್ತೊಮ್ಮೆ ನನ್ನ ಗಮನಕ್ಕೆ ತರಬಹುದು. ಜನಪ್ರತಿನಿಧಿಗಳು ನೀತಿ, ನ್ಯಾಯ ಹಾಗೂ ಧರ್ಮದಿಂದ ಆಡಳಿತ ನಡೆಸಬೇಕು. ಸರ್ಕಾರಿ ಕಟ್ಟಡಗಳು, ರಸ್ತೆ, ಶಾಲಾ ಕಾಲೇಜುಗಳು, ನೀರಾವರಿ ಯೋಜನೆಗಳು ಜನಪ್ರತಿನಿಧಿಗಳ ಸಾಧನೆಯನ್ನು ಬಿಂಬಿಸುತ್ತವೆ ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳಿನಿಂದ 7 ಜನತಾ ದರ್ಶನ ಕಾರ್ಯಮಕ್ರಗಳನ್ನು ವಿವಿಧ ತಾಲ್ಲೂಕುಗಳಲ್ಲಿ ಹಮ್ಮಿಕೊಳ್ಳಲಾಗಿದೆ. 8ನೇ ಜನತಾ ದರ್ಶನ ಕಾರ್ಯಕ್ರಮವನ್ನು ಹೊಳಲ್ಕೆರೆ ಪಟ್ಟಣದಲ್ಲಿ ಆಯೋಜಿಸಲಾಗಿದೆ. ಈವರೆಗೂ ಜನತಾದರ್ಶನದಲ್ಲಿ ಒಟ್ಟು 1585 ಅರ್ಜಿಗಳು ಸ್ವೀಕರಿಸಲಾಗಿದ್ದು, 1286 ಅರ್ಜಿಗಳನ್ನು ವಿಲೇ ಮಾಡಿ ಜನರ ಸಮಸ್ಯೆಗಳಿಗೆ ಪರಿಹಾರ ನೀಡಲಾಗಿದೆ. 299 ಅರ್ಜಿಗಳು ಇತ್ಯರ್ಥ ಬಾಕಿ ಇದೆ. ಇದರಲ್ಲಿ ಕಂದಾಯ ಇಲಾಖೆ ಸಂಬಂಧಿಸಿದ 144 ಹಾಗೂ ವಿವಿಧ ಇಲಾಖೆ ಸೇರಿದ 155 ಅರ್ಜಿಗಳು ಬಾಕಿ ಇವೆ ಎಂದರು.

ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಜಿಲ್ಲಾ ಕೇಂದ್ರಗಳಿಗೆ ಅಲೆದಾಟ ಮಾಡುವುದನ್ನು ತಪ್ಪಿಸಿ, ಸ್ಥಳದಲ್ಲಿಯೇ ಪರಿಹಾರ ನೀಡಲಾಗುವುದು. ಜನತಾ ದರ್ಶನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಐಪಿಜಿಆರ್‌ಎಸ್ ಪೋರ್ಟಲ್ ಮೂಲಕ ಗಣಕೀಕೃತಗೊಳಿಸಲಾಗುವುದು. ಆಡಳಿತದಲ್ಲಿ ಪಾರ್ದರ್ಶಕತೆ ತರುವ ಸಲುವಾಗಿ ಸಕಾಲ ಹಾಗೂ ಇ-ಆಫೀಸ್ ಜಾರಿ ಮಾಡಲಾಗಿದೆ ಎಂದರು.

ಬರಗಾಲಕ್ಕೆ ಸಂಬಂಧಿಸಿದ ಜಿಲ್ಲೆಯ ಎಲ್ಲಾ ಮಾಹಿತಿಗಳನ್ನು ರಾಜ್ಯ ಸರ್ಕಾರದ ಮೂಲಕ ಕೇಂದ್ರಕ್ಕೆ ಸಲ್ಲಿಸಲಾಗಿದೆ. ಈ ಮೊದಲು ಬೆಳೆ ಪರಿಹಾರದ ಹಣವನ್ನು "ಪರಿಹಾರ ಪೋರ್ಟಲ್" ಮೂಲಕ ರೈತರಿಗೆ ಪಾವತಿಸಲಾಗುತ್ತಿತ್ತು. ಆದರೆ ಈಗ ಈ ಕಾರ್ಯದಲ್ಲಿ ಇನ್ನಷ್ಟು ನಿಖರತೆ ಹಾಗೂ ವೇಗ ತರಲು ಬೆಳೆ ಪರಿಹಾರದ ಮೊತ್ತವನ್ನು ಫ್ರುಟ್ಸ್ ತಂತ್ರಾಂಶದ ಮಾಹಿತಿ ಆಧರಿಸಿ ಸರ್ಕಾರ ನೇರವಾಗಿ ರೈತರ ಖಾತೆಗೆ ಪರಿಹಾರದ ಮೊತ್ತ ಜಮೆ ಮಾಡಲಿದೆ. ಜಿಲ್ಲೆಯಲ್ಲಿ ಶೇ.80 ರಷ್ಟು ರೈತರು ಫ್ರುಟ್ಸ್ ನೋಂದಣಿ ಮಾಡಿಕೊಂಡಿದ್ದಾರೆ. ಉಳಿದ ರೈತರು ಸಹ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ರೈತರು ಫ್ರುಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿದ ಜಮೀನು ಆಧರಿಸಿ ಪರಿಹಾರ ಧನ ದೊರಕಲಿದೆ. ಹಾಗಾಗಿ ರೈತರು ಫ್ರುಟ್ಸ್ ನೋಂದಣಿಯಲ್ಲಿ ತಮ್ಮ ಹೆಸರಿನಲ್ಲಿ ಇರುವ ಒಟ್ಟು ವ್ಯವಸಾಯ ಭೂಮಿಯ ನಿಖರ ಪ್ರಮಾಣವನ್ನು ನೋಂದಣಿ ಮಾಡಿಸಬೇಕು. ಇದಕ್ಕಾಗಿ ಸಂಬಂಧಪಟ್ಟ ಗ್ರಾಮ ಲೆಕ್ಕಿಗರು, ಕಂದಾಯ ನಿರೀಕ್ಷಕರು, ಕೃಷಿ ಅಥವಾ ತೋಟಗಾರಿಕೆ ಇಲಾಖೆಯನ್ನು ಸಂಪರ್ಕಿಸಬೇಕು. ಬರ ಪರಿಹಾರ ಧನವನ್ನು ಹೊಸ ತಂತ್ರಾಂಶ ಆಧರಿಸಿ, ಜಮೆ ಮಾಡುವುದರ ಮೂಲಕ, ಚಳ್ಳಕೆರೆ ತಾಲ್ಲೂಕಿನಲ್ಲಿ ಪ್ರಾಯೋಗಿಕವಾಗಿ ರಾಜ್ಯ ಸರ್ಕಾರ ಈ ಯೋಜನೆಗೆ ಶೀಘ್ರದಲ್ಲಿ ಚಾಲನೆ ನೀಡಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಫಲಾನುಭವಿಗಳಿಗೆ ಸೌಲಭ್ಯ ವಿತರಣೆ: ಜನತಾ ದರ್ಶನ ಕಾರ್ಯಕ್ರಮದ ಅಂಗವಾಗಿ ವಿವಿಧ ಇಲಾಖೆಗಳಿಂದ ಫಲಾನುಭವಿಗಳಿಗೆ ಸೌಲಭ್ಯ ವಿತರಣೆ ಮಾಡಲಾಯಿತು. ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಜಿಲ್ಲಾ ಪಂಚಾಯತ್ ಅಭಿವೃದ್ಧಿ ಹಾಗೂ ಅರ್ನಿಬಂಧಿತ ಅನುದಾನದಲ್ಲಿ 6 ಹಾಗೂ ಜಿಲ್ಲಾ ಖನಿಜ ಪತಿಷ್ಠಾನ ಟ್ರಸ್ಟ್ ಅನುದಾನದಲ್ಲಿ 9 ಸೇರಿ ಒಟ್ಟು 15 ವಿಕಲಚೇತನರಿಗೆ ಯಂತ್ರ ಚಾಲಿತ ದ್ವಿಚಕ್ರ ವಾಹನಗಳನ್ನು ವಿತರಿಸಲಾಯಿತು. ವಿವಾಹ ಪ್ರೋತ್ಸಾಹ ಧನ ಯೋಜನೆ ಅಡಿ 3 ದಂಪತಿಗಳಿಗೆ ತಲಾ ರೂ.50,000 ಗಳ ಚೆಕ್ ನೀಡಲಾಯಿತು.

ಪಳಕೆಹಳ್ಳಿ ಗ್ರಾಮದ ಮಾರಮ್ಮ ಮಹಿಳಾ ಸ್ವ ಸಹಾಯ ಸಂಘ ಹಾಗೂ ಚಿಕ್ಕನಕಟ್ಟೆ ಗ್ರಾಮದ ಮಂಜುನಾಥ ಮಹಿಳಾ ಸ್ವ ಸಹಾಯ ಸಂಘಗಳಿಗೆ ಕಿರು ಸಾಲ ಯೋಜನೆಯಡಿ ಪ್ರತಿ ಸದಸ್ಯರಿಗೆ ರೂ.15 ಸಾವಿರದಂತೆ 2 ಸಂಘಗಳಿಗೆ ತಲಾ ರೂ. 2.50 ಲಕ್ಷ ಸಹಾಯಧನ ಮಂಜೂರಾತಿ ಪತ್ರವನ್ನು ಸಾಂಕೇತಿಕವಾಗಿ ನೀಡಲಾಯಿತು. ರೈತ ಆತ್ಮಹತ್ಯೆ ಪರಿಹಾರ, ಸುಕನ್ಯಾ ಸಮೃದ್ಧ ಯೋಜನೆ, ಪಿ.ಎಂ. ಆವಾಸ್ ಯೋಜನೆ, ಪೋಷಣಾ ಅಭಿಯಾನ್, ಪೌತಿ ಖಾತೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಫಲಾನುಭವಿಗಳಿಗೆ ವಿತರಿಸಲಾಯಿತು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಮೂವರು ಗರ್ಭಿಣಿಯರಿಗೆ ವೇದಿಕೆ ಮೇಲೆ ಸೀಮಂತ ಕಾರ್ಯ ನೆರವೇರಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಶಾಸಕ ಡಾ. ಎಂ. ಚಂದ್ರಪ್ಪ ಹಾಗೂ ಜಿಲ್ಲಾಧಿಕಾರಿ ದಿವ್ಯಪ್ರಭು ಅವರನ್ನು ವಿಶೇಷ ಅಲಂಕೃತ ಎತ್ತಿನ ಗಾಡಿಯಲ್ಲಿ ಮೆರವಣಿಗೆ ಮೂಲಕ ಸಂವಿಧಾನ ಸೌಧದ ಆವರಣಕ್ಕೆ ಕರೆತರಲಾಯಿತು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನಾ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ರಾಮಗಿರಿ,ಚಿಕ್ಕಜಾಜೂರು-ಗಂಜಿಗನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ನೂತನ ವಸತಿ ಗೃಹಗಳ ನಿರ್ಮಾಣ, ಹೊಳಲ್ಕೆರೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಶಂಕುಸ್ಥಾಪನೆ ನೆರವೇರಿಸಿದರು.

ಹೊಳಲ್ಕೆರೆ ಪುರಸಭೆ ವತಿಯಿಂದ ಪರಿಶಿಷ್ಟ ಜಾತಿ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಕ್ಕೆ ರೂ.80 ಸಾವಿರ ವೆಚ್ಚದಲ್ಲಿ ನೀಡಲಾದ 8 ಅಲ್ಮಾರಿಗಳು, ರೂ.2 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ವಿದ್ಯಾರ್ಥಿ ನಿಲಯಕ್ಕೆ ನೀಡಲಾದ 2 ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿ ನಿಲಯಕ್ಕೆ ನೀಡಲಾದ 2 ಆರ್.ಓ.ಘಟಕಗಳು ಹಾಗೂ ರೂ. 40 ಸಾವಿರ ವೆಚ್ಚದ 2 ಕಾಟುಗಳನ್ನು ಹಸ್ತಾಂತರಿಸಿದರು.

ಸಂವಿಧಾನ ಸೌಧ ಮುಂದಿನ ಆವರಣದಲ್ಲಿ ಆಯೋಜಿಸಲಾದ ವಿವಿಧ ಇಲಾಖೆಗಳ ಹಾಗೂ ಮಹಿಳಾ ಸ್ವ ಸಹಾಯ ಸಂಘಗಳ ವಸ್ತು ಪ್ರದರ್ಶನ ಮಳಿಗೆಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಉಚಿತವಾಗಿ ಆರೋಗ್ಯ ತಪಾಸಣೆ ನಡೆಸಲಾಯಿತು. ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ 8 ವಿವಿಧ ಕೌಂಟರ್‌ಗಳನ್ನು ತರೆದು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಬೀಬಿ ಫಾತಿಮಾ, ತಾ.ಪಂ. ಇಓ ಶಿವಪ್ರಕಾಶ್ ಸೇರಿದಂತೆ ಹೊಳಲ್ಕೆರೆ ಪುರಸಭಾ ಸದಸ್ಯರು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ವಿದ್ಯಾರ್ಥಿಗಳಿಗೆ ಪರೀಕ್ಷೆ ತಯಾರಿ ಜತೆ ಶಿಕ್ಷಣ ಸಂವಾದ




» **ಪರಶುರಾಂಪುರ**

ಹೆಚ್ಚು ಅಂಕಗಳಿಸುವ, ಅಭ್ಯಾಸದ ಕ್ರಮ, ಉತ್ತರ ಬರೆಯುವ ವಿಧಾನ ಕುರಿತು ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳೊಂದಿಗೆ ನೇರವಾಗಿ ಚರ್ಚಿಸಿ ಮಾರ್ಗದರ್ಶನ ನೀಡುವ ಕಾರ್ಯಕ್ರಮ ನಡೆಯಿತು.ಸಮೀಪದ ದೊಡ್ಡಚೆಲ್ಲೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ವಿದ್ಯಾರ್ಥಿಗಳಿಗಾಗ ಪರೀಕ್ಷೆ ತಯಾರಿ ಜತೆ ಶಿಕ್ಷಣ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿತ್ತು.ಸಂವಾದಕ್ಕೂ ಮುನ್ನ ಮುಖ್ಯ ಶಿಕ್ಷಕ ಹನುಮಂತರಾಯಪ್ಪ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಕ್ಕಳು ಚೆನ್ನಾಗಿ ಓದಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವುದಕ್ಕೆ ಇಂತಹ ಕಾರ್ಯಕ್ರಮ ಉಪಯುಕ್ತವಾಗಿದ್ದು, ವಿದ್ಯಾರ್ಥಿಗಳ ಸಾಧನೆಗೆ ಹೆಚ್ಚು ಅನುಕೂಲವಾಗಲಿವೆ. ವಿದ್ಯಾರ್ಥಿಗಳು ಮುಕ್ತವಾಗಿ ಚರ್ಚಿಸಿ ಸೂಕ್ತ ಮಾರ್ಗದರ್ಶನ ಪಡೆಯಬೇಕು ಎಂದರು.ಸಂಪನ್ಮೂಲ ವ್ಯಕ್ತಿಯಾಗಿ ಗಜೇಂದ್ರ ನಾಯ್ಕ್ ಮಾತನಾಡಿ ಪರೀಕ್ಷಾ ತಯಾರಿ, ಮಕ್ಕಳಿಗಿರುವ ವಿಷಯವಾರು ಸಮಸ್ಯೆಗಳ ಪರಿಹಾರ ಹಾಗೂ ನೆನೆಪಿಗೆ ಧ್ಯಾನದಿಂದ ಸಹಕಾರಿ, ಅಂಕ ಗಳಿಸುವುದಕ್ಕೆ ಅನುಸರಿಬೇಕಾದ ಕ್ರಮಗಳ ಬಗ್ಗೆ ತಿಳಿಸಿದರು .ಪರೀಕ್ಷೆ ಎಂದರೇ ಜ್ಞಾನ, ಕೌಶಲ, ಸಾಮರ್ಥ್ಯ, ದೈಹಿಕ ಅರ್ಹತೆ, ಅಥವಾ ಇತರ ಅನೇಕ ವಿಷಯಗಳಲ್ಲಿ ಅಳೆಯಲು ಉದ್ದೇಶಿಸುವ ಒಂದು ಮೌಲ್ಯಮಾಪನ. ಈ ಕಾರ್ಯಕ್ರಮದಲ್ಲಿ ಎಲ್ಲ ಪಠ್ಯ ವಿಷಯಗಳ ಬಗ್ಗೆ ನೆನಪಿನ ಶಕ್ತಿ ಹೆಚ್ಚಿಸುವ ಕ್ರಮಗಳು ಜತೆ ಮಕ್ಕಳೊಂದಿಗೆ ಸಂವಾದ ನಡೆಸಿ ಅವರ ಪ್ರಶ್ನೆಗಳಿಗೆ ಉತ್ತರಿಸಿ, ಪರೀಕ್ಷೆಯನ್ನು ಸರಳವಾಗಿ ಎದುರಿಸಿ, ಹೆಚ್ಚು ಅಂಕ ಪಡೆಯುವ ದಿಸೆಯಲ್ಲಿ ಮಾರ್ಗದರ್ಶನ ನೀಡಿದರು.ಈ ವೇಳೆಯಲ್ಲಿ ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಸಿಬ್ಬಂದಿ ಇದ್ದರು.

**ಪ್ರಮುಖ ಸುದ್ದಿ**

### ಪರಿಹಾರ ಹಣ ಸಾಲಕ್ಕೆ ಜಮಾ ಪಡೆದಿಲ್ಲ: ಬ್ಯಾಂಕ್ ಅಧಿಕಾರಿಗಳ ಸ್ಪಷ್ಟಣೆ

# ಯಾವುದೇ ರೈತರಿಗೆ ಸಾಲವಸೂಲಾತಿ ನೋಟಿಸ್ ನೀಡಿಲ್ಲ



» **ಚಳ್ಳಕೆರೆ**

ಕಳೆದ ಕೆಲವು ತಿಂಗಳುಗಳಿಂದ ತಾಲ್ಲೂಕಿನಾದ್ಯಂತ ಬರಗಾಲ ಘೋಷಣೆಯಾದರೂ ಬ್ಯಾಂಕ್ ಅಧಿಕಾರಿಗಳುರೈತರಪರಿಹಾರದಹಣವನ್ನು ಸಾಲಕ್ಕೆ ಜಮಾಮಾಡಿಕೊಳ್ಳುವುದಲ್ಲದೆ, ರೈತರಿಗೆ ನೋಟಿಸ್ ನೀಡುತ್ತಿರುವ ಬಗ್ಗೆ ಕರ್ನಾಟಕ ರಾಜ್ಯ ರೈತ ಸಂಘ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ಬ್ಯಾಂಕ್ ಅಧಿಕಾರಿಗಳ ಸಭೆ ಕಡೆಯುವಂತೆ ತಹಶೀಲ್ದಾರ್‌ಗೆ ತಾಕೀತು ಮಾಡಲಾಗಿತ್ತು.

ಈ ಹಿನ್ನೆಲೆಯಲ್ಲಿ ತಹಶೀಲ್ದಾರ್ ರೇಹಾನ್ ಪಾಷ, ಮಂಗಳವಾರ ನಗರ ಹಾಗೂ ತಾಲ್ಲೂಕಿನಾದ್ಯಂತ ಇರುವ ಬ್ಯಾಂಕ್ ಅಧಿಕಾರಿಗಳು ಹಾಗೂ ರೈತ ಪ್ರತಿನಿಧಿಗಳ ಸಭೆ ನಡೆಸಿ ರೈತರ ಎದುರೇ ರೈತರ ಸಮಸ್ಯೆಗಳ ಬಗ್ಗೆ ಬ್ಯಾಂಕ್ ಅಧಿಕಾರಿಗಳಿಗೆ ಸಂಪೂರ್ಣ ಮನವರಿಕೆ ಮಾಡಿಕೊಟ್ಟರು. ಪ್ರಸ್ತುತ ಸರ್ಕಾರ ಈಗಾಗಲೇ ನಿರ್ದೇಶನ ನೀಡಿದ್ದು, ರೈತ ಯಾವುದೇ ಸಾಲ ಪಡೆಯಲಿ ಅವರಿಗೆ ನೋಟಿಸ್ ನೀಡಬಾರದು. ಅವರ ಯಾವುದೇ ಪರಿಹಾರ ಹಾಗೂ ಸಾಮಾಜಿಕ ಭದ್ರತೆಯ ಹಣ ಸಾಲಕ್ಕೆ ಜಮಾ ಮಾಡಿಕೊಳ್ಳಬಾರದು. ರೈತರಿಗೆ ಮಾಹಿತಿ ನೀಡಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಇದಕ್ಕೆ ಉತ್ತರಿಸಿದ ಬ್ಯಾಂಕ್ ಅಧಿಕಾರಿಗಳು ರಾಜ್ಯ ಸರ್ಕಾರದಿಂದ ಈಗಾಗಲೇ ಸ್ಪಷ್ಟ ನಿರ್ದೇಶನ ನೀಡಿದ್ದು, ಎಲ್ಲೂ ಸಹ ರೈತರ ಪರಿಹಾರದ ಹಣ ಹಾಗೂ ಇತರೆ ಹಣವನ್ನು ಅವರ ಸಾಲಕ್ಕೆ ಜಮಾ ಮಾಡುತ್ತಿಲ್ಲ, ನೋಟಿಸ್ ಸಹ ನೀಡಿಲ್ಲ. ಈ ಬಗ್ಗೆ ಈಗಾಗಲೇ ಬ್ಯಾಂಕ್ ಹಿರಿಯ ಅಧಿಕಾರಿಗಳು ನಮಗೆ ಸೂಚನೆ ನೀಡಿದ್ದಾರೆ. ಅಂತಹ ಯಾವುದೇ ಪ್ರಕರಣವಿದ್ದಲ್ಲಿ ಗಮನಕ್ಕೆ ತಂದರೆ ಕೂಡಲೇ ಪರಿಹಾರಿಸುವುದಾಗಿ ತಿಳಿಸಿದರು.

ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ, ತಾಲ್ಲೂಕು ಅಧ್ಯಕ್ಷ ಶ್ರೀಕಂಠಪ್ಪ, ಯರ್‍ರಿಸ್ವಾಮಿ, ಶಿರಸ್ತೇದಾರ್ ಸದಾಶಿವಪ್ಪ, ಕಂದಾಯಾಧಿಕಾರಿ ಲಿಂಗೇಗೌಡ ಮುಂತಾದವರು ಉಪಸ್ಥಿತರಿದ್ದರು.



# ಕಾಶ್ಮೀರದ
## ಪ್ರವಾಸದಲ್ಲಿ ಕೆಲ ನಿಮಿಷಗಳು ನಿಮ್ಮೊಂದಿಗೆ......

ಕೆಲವು ಯೂರೋಪಿಯನ್ ದೇಶಗಳು, ದಕ್ಷಿಣ ಏಷ್ಯಾದ ಒಂದೆರಡು ದೇಶಗಳು, ಭಾರತದ ಅನೇಕ ರಾಜ್ಯಗಳು, ಕರ್ನಾಟಕದ ಬಹುತೇಕ ತಾಲ್ಲೂಕುಗಳಲ್ಲಿ ಪ್ರವಾಸ ಮಾಡಿದ್ದೇನೆ. ಆಫ್ರಿಕಾ, ಆಸ್ಟ್ರೇಲಿಯಾ, ಅಮೆರಿಕ, ಏಷ್ಯಾ ಮುಂತಾದ ವಿಶ್ವದ ಭೂ ಪ್ರದೇಶಗಳ ಇಂದಿನ ಜನಜೀವನದ ಬಗ್ಗೆ ಒಂದಷ್ಟು ಸಣ್ಣ ಮಾಹಿತಿ ಸಂಗ್ರಹಿಸಿದ್ದೇನೆ. ಕೆಲವು ವಿದೇಶಿ ಗೆಳೆಯರ ಜೊತೆ ಅಲ್ಲಿನ ಪರಿಸ್ಥಿತಿಯ ಬಗ್ಗೆ ಆಗಾಗ ಚರ್ಚಿಸುತ್ತಿರುತ್ತೇನೆ. ಈಗ ಭಾರತ ದೇಶದ ಉತ್ತರದ ತುತ್ತ ತುದಿ ಜಮ್ಮು ಕಾಶ್ಮೀರ ಕಣಿವೆಯಲ್ಲಿ ಪ್ರವಾಸದಲ್ಲಿದ್ದೇನೆ.

ಸುಮಾರು ಅರ್ಧ ಶತಮಾನಗಳ ಕಾಲ ಇದನ್ನೆಲ್ಲಾ ಸೂಕ್ಷ್ಮವಾಗಿ ನನ್ನ ಅರಿವಿನ ಮಿತಿಯಲ್ಲಿ ವಿಮರ್ಶೆಗೊಳಪಡಿಸಿದಾಗ....

ಮುಖ್ಯವಾಗಿ ಸಮೂಹ ಸಂಪರ್ಕ ಕ್ರಾಂತಿಯ ಫಲವಾಗಿ ಇಡೀ ವಿಶ್ವದ ಸಾಮಾನ್ಯ ಜನರ ಆಹಾರ ಉಡುಗೆ ತೊಡುಗೆ ರಸ್ತೆಗಳು ಕಟ್ಟಡಗಳು ವಾಹನಗಳು ಪರಿಸರ ಮಾಲಿನ್ಯ ನಗರೀಕರಣದ ತ್ಯಾಜ್ಯ, ಮನಸ್ಥಿತಿಗಳು ಜೊತೆಗೆ ಮತ್ತೊಂದಿಷ್ಟು ಸಮಾನ ವಿಷಯಗಳು ಎಲ್ಲವೂ ಬಹುತೇಕ ಒಂದೇ ರೀತಿಯ ಪರಿವರ್ತನೆಯ ಹಾದಿಯಲ್ಲಿ ಸಾಗುತ್ತಿದೆ. ತಮ್ಮ ಮೂಲ ಸ್ವರೂಪದ ಬದಲಾವಣೆಯ ದಿಕ್ಕು ಏಕೀಭವನ ಹೊಂದುತ್ತಿರುವಂತೆ ಮೇಲ್ನೋಟಕ್ಕೆ ಕಂಡುಬರುತ್ತಿದೆ.

ಇಡೀ ವಿಶ್ವದ ಸ್ಥಳೀಯ ಆಹಾರ ಪದ್ದತಿಗಳು ಭಿನ್ನವಾಗಿದ್ದರು, ಈಗಲೂ ಪ್ರಮುಖ ಆಹಾರ ಅದೇ ಆಗಿದ್ದರು, ಪಾಶ್ಚಾತ್ಯ ದೇಶಗಳ ಪೀಜಾ ಬರ್ಗರ್ ಚೀನಾ ಶೈಲಿಯ ಊಟ ಮುಂತಾದ ಕೆಲವು ವಿಶಿಷ್ಟ ಖಾದ್ಯಗಳು ಕಾಂಟಿನೆಂಟಲ್ ಫುಡ್ ಹೆಸರಿನಲ್ಲಿ ನಗರ ಪಟ್ಟಣಗಳನ್ನು ದಾಟಿ ಚಿಕ್ಕ ಪ್ರದೇಶಗಳಿಗೂ ವ್ಯಾಪಿಸುತ್ತಿದೆ. ಕೆ ಎಫ್ ಸಿ, ಮ್ಯಾಕ್ ಡೊನಾಲ್ಡ್, ನೂಡಲ್ಸ್, ಬ್ರೆಡ್ ಆಮ್ಲೆಟ್, ಕೆಲವು ಐಸ್ ಕ್ರೀಮ್ ಗಳು ಇನ್ನೂ ಅನೇಕ ಪದಾರ್ಥಗಳ ಬ್ರಾಂಡೆಡ್ ಅಂಗಡಿಗಳು ಎಲ್ಲಾ ಪ್ರಮುಖ ವ್ಯಾಪಾರಿ ಸ್ಥಳಗಳಲ್ಲಿ ಕಾಣಿಸಿಕೊಂಡು ಎಲ್ಲಾ ಊರು ಪ್ರದೇಶ ಗಲ್ಲಿ ಮಾರುಕಟ್ಟೆ ಮಾಲುಗಳು ಒಂದೇ ರೀತಿಯಲ್ಲಿ ಕಾಣತೊಡಗಿದೆ.

ಆಫ್ರಿಕಾದ ಒಂದು ಸಣ್ಣ ಪ್ರದೇಶವೇ ಇರಲಿ, ಭಾರತದ ಕೊಡಗಿನ ಸಣ್ಣ ಗ್ರಾಮವೇ ಇರಲಿ, ನ್ಯೂಜಿಲೆಂಡಿನ ಹಿಮಾಚ್ಛಾದಿತ ಪ್ರದೇಶವೇ ಇರಲಿ, ಚೀನಾದ ಅತಿ ಹಿಂದುಳಿದ ಪ್ರದೇಶವೇ ಇರಲಿ, ನ್ಯೂಯಾರ್ಕ್, ಲಂಡನ್, ಸಿಡ್ನಿ, ಸಿಯೋಲ್, ಬ್ಯೂನಸ್ ಐರಿಸ್ ಹೀಗೆ ಯಾವುದೇ ಪ್ರದೇಶದ ಎಲ್ಲಾ ಮಧ್ಯಮ ವರ್ಗದ ಜನರ ವೇಷಭೂಷಣಗಳಲ್ಲಿ ಅಂತಹ ದೊಡ್ಡ ವ್ಯತ್ಯಾಸ ಕಾಣುವುದಿಲ್ಲ. ಜೀನ್ಸ್ ಶಾರ್ಟ್ಸ್ ಶೂಸ್ ಟೀಶರ್ಟ್ಸ್ ಕಲರ್ಸ್ ಲೆಗ್ಗಿನ್ಸ್ ಮುಂತಾದ ಎಲ್ಲಾ ರೀತಿಯ ಡಿಸೈನುಗಳು ಎಲ್ಲೆಲ್ಲೂ ಒಂದೇ ರೀತಿ ಕಾಣುತ್ತದೆ.

ರಸ್ತೆ ಕಟ್ಟಡ ಮಾರುಕಟ್ಟೆಗಳ ವಿನ್ಯಾಸ, ವಸ್ತುಗಳ ಜೋಡಣೆ, ನಾಮ ಫಲಕಗಳು ಇತರ ಅನೇಕ ಸ್ವರೂಪಗಳು ಇಡೀ ವಿಶ್ವದಲ್ಲೇ ಒಂದೇ ರೀತಿಯಲ್ಲಿ ಕಾಣುತ್ತದೆ. ಗುಣಮಟ್ಟದಲ್ಲಿ ಮಾತ್ರ ಒಂದಷ್ಟು ವ್ಯತ್ಯಾಸ ಇರುತ್ತದೆ.

ಯೂರೋಪ್ ಆಸ್ಟ್ರೇಲಿಯಾ ಅಮೆರಿಕ ಜಪಾನ್ ಕೊರಿಯಾ ಯುನೈಟೆಡ್ ಅರಬ್ ಎಮಿರೇಟ್ಸ್ ಸಿಂಗಪುರ ಟರ್ಕಿ ರಷ್ಯಾ ಮುಂತಾದ ದೇಶಗಳಲ್ಲಿ ಶ್ರೀಮಂತಿಕೆ ಮತ್ತು ಜನಸಂಖ್ಯೆಯ ಕಡಿಮೆ ಒತ್ತಡದ ಕಾರಣದಿಂದ ಒಂದಷ್ಟು ಕೊಳಚೆ ಪ್ರದೇಶಗಳು ಕಡಿಮೆ ಇದ್ದು ಸುಂದರ ಮೇಲ್ಮೈ ವಾತಾವರಣ ಇರಬಹುದು. ಉಳಿದೆಲ್ಲಾ ದೇಶಗಳು ಜನಸಂಖ್ಯೆಯ ಒತ್ತಡ ಮತ್ತು ಅದರಿಂದಾಗಿ ಹರಡುತ್ತಿರುವ ತ್ಯಾಜ್ಯ ನಿಯಂತ್ರಿಸಲಾಗದೆ ತುಂಬಾ ಹದಗೆಟ್ಟ ಪರಿಸ್ಥಿತಿ ಕಾಣುತ್ತಿದ್ದೇವೆ. ಪ್ಲಾಸ್ಟಿಕ್ ಕಸ ಎಲ್ಲಾ ಪ್ರದೇಶಗಳಲ್ಲಿ ಒಂದೇ ರೀತಿಯಲ್ಲಿ ಕಾಣುತ್ತಿದೆ.

ಪ್ರವಾಸೋದ್ಯಮ ಮತ್ತು ವಸತಿ ಪ್ರದೇಶಗಳು ಸಹ ಒಂದೇ ರೀತಿ ಇರುತ್ತದೆ. ಅಪಾರ್ಟ್ಮೆಂಟ್ ಸಂಸ್ಕೃತಿ, ರಿಯಲ್ ಎಸ್ಟೇಟ್ ಉದ್ಯಮ ಎಲ್ಲಾ ಸರ್ವವ್ಯಾಪಿಯಾಗಿ ಯಾವ ಪ್ರದೇಶವನ್ನು ಬಿಟ್ಟಿಲ್ಲ.

ಇದನ್ನು ಈಗ ಪ್ರಸ್ತಾಪಿಸಲು ಕಾರಣ ಬೆಂಗಳೂರು ದೆಹಲಿ ಪಂಜಾಬ್ ಹರಿಯಾಣ ಜಮ್ಮು ಕಾಶ್ಮೀರದವರೆಗೂ ಹೋಟೆಲ್ ಡಾಬ ಮೆಡಿಕಲ್ ಸ್ಟೋರ್ ಮೆಡಿಕಲ್ ಲ್ಯಾಬ್ ಬಟ್ಟೆ ಅಂಗಡಿ ಆಟೋ ಕಾರು ಎಲ್ಲವೂ ರೈಲು ಜನರ ವೇಷಭೂಷಣ ಎಲ್ಲವೂ ಒಂದೇ ರೀತಿಯಲ್ಲಿ ಕಂಡುಬರುತ್ತಿದೆ. ನಾವು ಅತ್ಯಂತ ಸುಂದರ ಎಂದು ಭಾವಿಸಲಾದ ಜಮ್ಮು ಕಾಶ್ಮೀರವೂ ಸಹ ತನ್ನ ತನವನ್ನು ಕಳೆದುಕೊಳ್ಳುತ್ತಿದೆ.

ಅತಿಯಾದ ಮಾರುಕಟ್ಟೆ ಪ್ರದೇಶಗಳು, ವಾಹನಗಳು, ವಿವಿಧ ಬ್ರಾಂಡಿನ ಬಟ್ಟೆ ಹೋಟೆಲುಗಳು, ಪ್ರವಾಸೋದ್ಯಮ ಏಜೆಂಟರಗಳ ದೊಡ್ಡ ವ್ಯವಹಾರ ಎಲ್ಲವೂ ಪ್ರಸಿದ್ಧ







ಯಾತ್ರಾಸ್ಥಳಗಳ ಮಾದರಿಯಲ್ಲೇ ನಡೆಯುತ್ತಿದೆ. ರಾಜಸ್ಥಾನ – ಮೈಸೂರು – ಪೂರ್ವದ ರಾಜ್ಯಗಳು ಎಲ್ಲವೂ ಒಂದೇ ರೀತಿಯಲ್ಲಿ ಇರುತ್ತದೆ. ಹೋಮ್ ಸ್ಟೇ – ಸರ್ವೀಸ್ ಅಪಾರ್ಟ್ಮೆಂಟ್ ಗಳು ಒಂದೇ ರೀತಿಯ ಬೆಲೆ ಮತ್ತು ಸೇವೆ ನೀಡುತ್ತವೆ.


ಈ ರೀತಿಯ ಅಭಿವೃದ್ಧಿಯ ಮಾದರಿಗಳು ಮೂಲ ಸಂಸ್ಕೃತಿಯನ್ನು ಆಪೋಷನ ತೆಗೆದುಕೊಳ್ಳುವ ಕ್ರಿಯೆಯನ್ನು ವಿಶ್ವದಾದ್ಯಂತ ಗಮನಿಸಬಹುದು. ಪಾಶ್ಚಾತ್ಯ ದೇಶಗಳಲ್ಲಿ ಈ ಕ್ರಿಯೆ ತುಂಬಾ ನಿಧಾನಗತಿಯಲ್ಲಿದ್ದರೆ ಭಾರತದಲ್ಲಿ ಅತ್ಯಂತ ವೇಗವಾಗಿ ಆಗುತ್ತಿದೆ. ವೈವಿಧ್ಯತೆಯ ಮನೋ ಭೂಮಿಕೆ ಮರೆಯಾಗುತ್ತಿದೆ.


ಭೂಲೋಕದ ಸ್ವರ್ಗ ಎಂದು ಬಣ್ಣಿಸಲಾಗುವ ಕಾಶ್ಮೀರ ಕಣಿವೆಯಲ್ಲಿ ಸುತ್ತಾಡುವಾಗ ಪ್ರಾಕೃತಿಕ ಸೌಂದರ್ಯ ಹೆಚ್ಚು ಕಡಿಮೆ ಮೂಲ ಸ್ವರೂಪವನ್ನು ಉಳಿಸಿಕೊಂಡಿದೆ. ಆದರೆ ಮನುಷ್ಯ ಸಮಾಜ ಮತ್ತು ಕೃತಕ ಕಟ್ಟಡಗಳು ಇತರೆ ಪ್ರದೇಶಗಳಿಗಿಂತ ಭಿನ್ನವಾಗಿಲ್ಲ.


ಇಲ್ಲಿನ ಜನರು, ಸೈನಿಕರು, ಮಕ್ಕಳು, ಹೆಂಗಸರು ಹೀಗೆ ಎಲ್ಲರನ್ನೂ ಅವರ ಮನಸ್ಥಿತಿಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಾ ಸಾಗುತ್ತಿದ್ದೇನೆ. ಮಳೆ ಚಳಿ ಗಾಳಿಯ ಸಂಪೂರ್ಣ ಶೀತವಲಯದ ವಾತಾವರಣದಲ್ಲಿ, ನೆಟ್ ವರ್ಕ್ ಸಮಸ್ಯೆಯ ಮಧ್ಯೆ ಬದುಕಿನ ಸವಿಯನ್ನು ಗೆಳೆಯರೊಂದಿಗೆ ಸವಿಯುತ್ತಾ, ಇಲ್ಲಿನ ಭದ್ರತಾ ವ್ಯವಸ್ಥೆಯನ್ನು ನೋಡಿ ಒಳಗೆ ಮೂಡುವ ಸಣ್ಣ ಭಯವನ್ನು ಹಾಸ್ಯವಾಗಿ ಕಲ್ಪಿಸಿಕೊಂಡು ಹೊಟ್ಟೆ ತುಂಬಾ ನಗುತ್ತಾ ಪ್ರವಾಸ ಮುಂದುವರಿದಿದೆ. ನನ್ನ ಬದುಕಿನ ಪಯಣವೇ ಜನರ ಜೀವನಮಟ್ಟ ಸುಧಾರಣೆಯ ಮನಸ್ಸುಗಳ ಅಂತರಂಗದ ಚಳವಳಿ. ಅದರಲ್ಲಿ ಈ ಪ್ರವಾಸವು ಒಂದು ಭಾಗ ಮಾತ್ರ. ಜೊತೆಗೆ ನಿಮ್ಮೊಂದಿಗೆ ಸಂಪರ್ಕ ನಿರಂತರ.........ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ.

» **ಲೇಖನ ವಿವೇಕಾನಂದ.**
**ಹೆಚ್.ಕೆ. 9844013068**

»









Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T